ಸಂಪುಟ : 9 ಸಂಚಿಕೆ 309 ಪುಟ : 4+2 ಬೆಲೆ: 3.00 ಗುರುವಾರ ಜನವರಿ 23 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 309 Pages : 4+2 Price : 3.00 Thursday January 23 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜನವರಿ 23ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

**ಸ್ಥಳಗಳ ವಿವರ:** ವಾರ್ಡ್ ನಂ. 28 – ಪಂಚಾಕ್ಷರಿ ನಗರ 2ನೇ, 3 ನೇ ಕ್ರಾಸ್, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 11, 12 – ನಿಸರ್ಗ ಬಡಾವಣೆ, ಕರಿಯಮ್ಮನ ಕಲ್ಲು, ಗಣಪತಿ ಕಟ್ಟಿ, ಪಿ ಮತ್ತು ಟಿ ಕ್ವಾರ್ಟರ್ಸ್, ರಾಘವೇಂದ್ರ ಗುಡಿ, ಬಾವಿಕಟ್ಟಿ, ಹನುಮಂತ ದೇವರ ಗುಡಿ, ಚರ್ಚ್ ಭಾಗ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6 – ಸಿದ್ದಲಿಂಗ ನಗರ ಪೂರ್ತಿ ಭಾಗಗಳು, ಕನ್ಯಾಳ ಅಗಸಿ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 30, 34 – ವಡ್ಡರಗೇರಿ, ಕುಂಚಿ ಕೊರವರ ಓಣಿ, ಮೂರು ಶಿಳ್ಳಿನ ವಕಾರ, 1ನೇ ಕ್ರಾಸ್, ಶಿವಾನಂದ ಗಾರ್ಡನ್, 46 ಪ್ಲಾಟ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 20, 21, 25 – ಪಡಗದ ಭಾಗ 1,2 , ಸಿಂಧನೂರವರ ಲೈನ್, ಬೇವಿನ ಮರದಮ್ಮ, ಹುಲಿಗೆಮ್ಮನ ಗುಡಿ, ಕೊಟ್ಟೂರ, ಎಸ ಟಿ ಡಿ, ಗೌಳಿಯವರ ಲೈನ್, ಕೆರಕಲಮಟ್ಟಿ, ಸಿಟಿ ಹಾಲ್ ಭಾಗ-1,2 , ಕಲಬಂಡಿಯವರ ಲೈನ್, 2 ನಂ ಶಾಲೆ, ಹಾಳದಿಬ್ಬ, ಸೋಮೇಶ್ವರ ಗುಡಿ, ಶರೀಫ್ ಅಜ್ಜನ ಗದ್ದುಗೆ, ಖಾನತೋಟ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ ಮಾಡಲಾಗುವುದು ಎಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಗದಗ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಬ್ಯಾಟರಿ ಸೆಟ್ ಬದಲಾವಣೆ ಕಾಮಗಾರಿ ಕೈಗೊಳ್ಳುವುದರಿಂದ ಜ. 24ರಂದು ಮಧ್ಯಾಹ್ನ 2 ಗಂಟೆಯಿಂದ 4 ಗಂಟೆಯವರೆಗೆ 110 ಕೆವ್ಹಿ ಗದಗ ಉಪಕೇಂದ್ರದಿಂದ ವಿದ್ಯುತ್ ಪೂರೈಕೆಯಾಗುವ ಜಿಮ್ಸ್ ಆಸ್ಪತ್ರೆ, ಕುಡಿಯುವ ನೀರಿನ ಸ್ಥಾವರಗಳು, 33 ಕೆವ್ಹಿ ಐ.ಪಿಪಿ-ಕೆ.ಪಿ.ಸಿ.ಎಲ್, ನಾಗಾವಿ, ಮಲ್ಲಸಮುದ್ರ, ಪಯೋನಿರ್, ಟಿ.ಡಿ.ಪಿ ಎಲ್ 1 ಮತ್ತು 2, 33 ಕೆವಿ ಉಪಕೇಂದ್ರ-ಹುಲಕೋಟಿ, ಲಕ್ಕುಂಡಿ, ಕೆ.ಎಚ್.ಬಿ ಹಾಗೂ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕೈಗಾರಿಕಾ, ಸೋಲಾರ್ ಐ.ಪಿ.ಪಿ, ಮತ್ತು ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಪ್ರಕಟಣೆ ಯಲ್ಲಿ ವಿನಂತಿಸಲಾಗಿದೆ.

### ಅವಳಿ ನಗರಕ್ಕೆ ಕುಡಿಯುವ ನೀರು ಪೂರೈಕೆ ಕುರಿತಂತೆ ಸಭೆ ನಡೆಸಿದ ಸಚಿವ ಎಚ್.ಕೆ. ಪಾಟೀಲ

# ನಿಯಮಿತ ನೀರು ಪೂರೈಕೆಗೆ ಅಗತ್ಯ ಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಕುಡಿಯುವ ನೀರಿನ ಅವ್ಯವಸ್ಥೆಯನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಈ ಹಿನ್ನೆಲೆಯಲ್ಲಿ ನೀರಿನ ಪೂರೈಕೆಗೆ ಸಂಬಂಧಿಸಿದಂತೆ ಕಾರ್ಯಗಳ ಪಟ್ಟಿ ತಯಾರು ಮಾಡಲಾಗಿದೆ. ಶೀಘ್ರವೇ ನಿಯಮಿತ ನೀರು ಪೂರೈಕೆಗೆ ಸೂಚಿಸಲಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರು ತಿಳಿಸಿದರು.

ಗದಗ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ

> ಮೈಕ್ರೋ ಫೈನಾನ್ಸ್ ಸಂಸ್ಥೆಗಳ ದಂಧೆ ಹಾಗೂ ಮೀಟರ್ ಬಡ್ಡಿ ಮಾಫಿಯಾಕ್ಕೆ ಕಡಿವಾಣ ಹಾಕಲು ನೂತನ ಕಾಯ್ದೆ ಜಾರಿ ತರಲ ಸರಕಾರ ನಿರ್ಧರಿಸಿದೆ. ಮುಂದಿನ ಅಧಿವೇಶನದಲ್ಲಿಯೇ ವಿಧೇಯಕ ಮಂಡಿಸಲಾಗುವುದು. ಬಡವರ, ಮಧ್ಯಮ ವರ್ಗದವರ ಶೋಷಣೆ ತಡೆಗಟ್ಟುವುದು ಹಾಗೂ ಅವರನ್ನು ಸಂರಕ್ಷಿಸುವುದು ನಮ್ಮ ಸರ್ಕಾರದ ಕರ್ತವ್ಯವಾಗಿದೆ.
> **– ಎಚ್.ಕೆ. ಪಾಟೀಲ.**
> **ಗದಗ ಉಸ್ತುವಾರಿ ಸಚಿವರು.**



ಬುಧವಾರ ಗದಗ-ಬೆಟಗೇರಿ ಅವಳಿ ನಗರಕ್ಕೆ ಕುಡಿಯುವ ನೀರು ಪೂರೈಕೆ ಕುರಿತಂತೆ ಸಭೆ ಜರುಗಿಸಿ ನಂತರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಸದ್ಯಕ್ಕೆ ಗದಗ ನಗರಕ್ಕೆ 10 ದಿನಗಳಿಗೊಮ್ಮೆ ನೀರು ಪೂರೈಕೆ ಮಾಡಲಾಗುತ್ತಿದೆ. ಮುಂಚಿನ 10 ದಿನಗಳೊಳಗಾಗಿ ನೀರು ಪೂರೈಕೆ ಪ್ರಮಾಣವನ್ನು ಪ್ರತಿ ದಿವಸಕ್ಕೆ ಪೂರೈಸಲು ಕ್ರಮ ವಹಿಸಲಾಗುವುದು. ಮುಂಬರುವ ಫೆಬ್ರವರಿ ಅಂತ್ಯಕ್ಕೆ 4 ದಿವಸಕ್ಕೊಮ್ಮೆ ನೀರು ಸರಬರಾಜು ಮಾಡಲು ಪ್ರಯತ್ನಿಸಲಾಗುವುದು. ಈ ಬಗ್ಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಭೆಯಲ್ಲಿ ಚರ್ಚಿಸಲಾಗಿದೆ. ನೀರು ಪೂರೈಕೆ ವಿಷಯವನ್ನು ಗಂಭೀರವಾಗಿ ತೆಗೆದುಕೊಂಡು ಅಧಿಕಾರಿಗಳು ಕರ್ತವ್ಯ ನಿರ್ವಹಿಸುವಂತೆ ನಿರ್ದೇಶನ ನೀಡಲಾಗಿದೆ. ನಗರದ ತಿಲಕ್ ಪಾರ್ಕ್‌ನಲ್ಲಿ ಓವರ್‌ಹೆಡ್ ಟ್ಯಾಂಕ್

> ಲಕ್ಕುಂಡಿಯು ಶಿಲ್ಪಕಲೆಯ ತೊಟ್ಟಿಲು ಎಂದರೆ ಅತಿಶಯೋಕ್ತಿಯಲ್ಲ. ದೆಹಲಿಯ ಗಣರಾಜ್ಯೋತ್ಸವ ಪರೇಡ್‌ಗೆ ಲಕ್ಕುಂಡಿಯ ಬ್ರಹ್ಮ ಜಿನಾಲಯದ ಸ್ತಬ್ಧಚಿತ್ರವು ಆಯ್ಕೆಯಾಗಿದ್ದು, ಪೂರ್ವ ಸಿದ್ಧತೆ ಅಂತಿಮ ಹಂತದಲ್ಲಿದೆ. ಇದು ಗದಗ ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ ಎಂದು ಸಚಿವ ಎಚ್. ಕೆ. ಪಾಟೀಲ ತಿಳಿಸಿದರು.

ಸ್ವಚ್ಛತೆಯ ಕಾರ್ಯ ಮಾಡಲಾಗುತ್ತಿದೆ ಎಂದು ಸಚಿವರು ತಿಳಿಸಿದರು.

▶▶ 3ನೇ ಪುಟಕ್ಕೆ



### 'ಪ್ರತಿಜ್ಞಾ ಕ್ರಾಂತಿ' ಹೆಸರಿನಲ್ಲಿ ಮೀಸಲಾತಿಗಾಗಿ 8ನೇ ಹಂತದ ಹೋರಾಟ: ಬಸವಜಯ ಮೃತ್ಯುಂಜಯ ಸ್ವಾಮೀಜಿ

# ಹೋರಾಟ ಹತ್ತಿಕ್ಕಲು ಪ್ರಯತ್ನಿಸಿದರೆ ಹೆದರುವುದಿಲ್ಲ

■ ವಿಜಯಸಾಕ್ಷಿ ಸುದ್ದಿ, ಗದಗ

ಪಂಚಮಸಾಲಿಗಳಿಗೆ ಮೀಸಲಾತಿ ನೀಡುವಂತೆ ಆಗ್ರಹಿಸಿ ಬೆಳಗಾವಿಯಲ್ಲಿ ನಡೆದ ಹೋರಾಟದಲ್ಲಿ ಪೊಲೀಸರಿಂದ ಲಾಠಿ ಏಟು ತಿಂದು ಗಾಯಗೊಂಡವರ ಮನೆಗೆ ಭೇಟಿ ನೀಡಿ 'ಮೀಸಲಾತಿ ವೀರರು' ಎಂದು ಬಿರುದು ನೀಡಲು ತಿರ್ಮಾನಿಸಲಾಗಿದ್ದು, ರಾಜ್ಯದ ಪ್ರತಿಯೊಂದು ವಿಧಾನಸಭಾ ಕ್ಷೇತ್ರಕ್ಕೆ ತೆರಳಿ 'ಪ್ರತಿಜ್ಞಾ ಕ್ರಾಂತಿ' ಹೆಸರಿನಲ್ಲಿ 8ನೇ ಹಂತದ ಹೋರಾಟ ಆರಂಭ ಮಾಡಿದ್ದೇವೆ ಎಂದು ಕೂಡಲಸಂಗಮದ ಪಂಚಮಸಾಲಿ ಮಠದ ಪ್ರಥಮ ಜಗದ್ಗುರು ಬಸವಜಯ ಮೃತ್ಯುಂಜಯ ಮಹಾಸ್ವಾಮೀಜಿ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯದ ಪ್ರತಿಯೊಬ್ಬ ಪಂಚಮಸಾಲಿಗಳ ಮನೆಗೆ ತೆರಳಿ ರಾಜ್ಯ

> ಎಸ್.ನಿಜಲಿಂಗಪ್ಪನವರಿಂದ ಬಸವರಾಜ ಬೊಮ್ಮಾಯಿವರೆಗೆ ಲಿಂಗಾಯತ ಸಮಾಜದ 8 ಜನರು ಮುಖ್ಯಮಂತ್ರಿ ಸ್ಥಾನ ಅಲಂಕರಿಸಿದ್ದರು. ಯಾವುದೇ ಹೋರಾಟಗಾರರ ಮೇಲೆ ಹಲ್ಲೆ ಮಾಡುವ ಕೆಲಸ ಅವರು ಮಾಡಲಿಲ್ಲ. ಆದರೆ, ಸಿದ್ದರಾಮಯ್ಯನವರು ನಮ್ಮ ಸಮಾಜದ ಕಾರ್ಯಕರ್ತರ ಮೇಲೆ ಹಲ್ಲೆ ಮಾಡಿಸಿ ಕೈ ಸುಟ್ಟುಕೊಂಡಿದ್ದಾರೆ.
> **– ಶ್ರೀ ಬಸವಜಯ ಮೃತ್ಯುಂಜಯ ಸ್ವಾಮೀಜಿ.**
> **ಕೂಡಲಸಂಗಮ ಪಂಚಮಸಾಲಿ ಪೀಠ.**



ಸರ್ಕಾರ ಮೀಸಲಾತಿ ನಿರಾಕರಣೆ ಮಾಡಿರುವುದನ್ನು ತಿಳಿಸುತ್ತೇವೆ. ಪ್ರತಿಜ್ಞಾ ಕ್ರಾಂತಿ ಹೆಸರಿನಲ್ಲಿ ರಾಜ್ಯದ 224 ಕ್ಷೇತ್ರಗಳಲ್ಲಿ ಸಂಚಾರವನ್ನು ಈಗಾಗಲೇ ಜನೇವರಿ 14ರಿಂದ ಬಳ್ಳಾರಿಯಿಂದ ಆರಂಭ ಮಾಡಲಾಗಿದೆ. ನಮ್ಮ ಹೋರಾಟ ಹತ್ತಿಕ್ಕಲು ಪ್ರಯತ್ನ ಮಾಡಿದರೆ ಹೆದರುವವರು ನಾವಲ್ಲ. ನಮ್ಮ ಹೋರಾಟ ಯಾವುದೇ ಕಾರಣಕ್ಕೂ ನಿಲ್ಲುವುದಿಲ್ಲ ಎಂದು ಕಟುವಾಗಿ ಹೇಳಿದರು.

ಕಳೆದ ನಾಲ್ಕು ವರ್ಷದಿಂದ ಪಂಚಮಸಾಲಿಗಳು ಶಾಂತಿಯುತ ಹೋರಾಟ ಮಾಡಿಕೊಂಡು ಬಂದಿದ್ದಾರೆ. ಆದರೆ, ಡಿಸೆಂಬರ್‌ನಲ್ಲಿ ನಡೆದ ಹೋರಾಟವನ್ನು ರಾಜ್ಯ ಸರ್ಕಾರ ಹತ್ತಿಕ್ಕುವ ಪ್ರಯತ್ನ ಮಾಡಿ ಉದ್ದೇಶಪೂರ್ವಕವಾಗಿ ಹೋರಾಟಗಾರರ ಮೇಲೆ ಮಾರಣಾಂತಿಕ ಹಲ್ಲೆ ಮಾಡಿದೆ. ಹಲ್ಲೆ ನಡೆಸಿದವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಸಿಎಂ ಸಿದ್ದರಾಮಯ್ಯನವರಿಗೆ ಆಗ್ರಹಿಸಿದರೂ ನಮ್ಮ ಮನವಿಗೆ ಅವರು ಸ್ಪಂದಿಸುತ್ತಿಲ್ಲ. ಮುಖ್ಯಮಂತ್ರಿಗಳ ಧೋರಣೆಯಿಂದ ಸಮಾಜದ ಜನರು ಅಸಮಾಧಾನಗೊಂಡಿದ್ದಾರೆ ಎಂದು ಶ್ರೀಗಳು ಹೇಳಿದರು.

ಹೋರಾಟಗಾರರ ಮೇಲೆ ನಡೆದ ಹಲ್ಲೆಯ ಬಗ್ಗೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಗಮನಕ್ಕೆ ತರುವ ಕೆಲಸವನ್ನು ಪಂಚಮಸಾಲಿ ಸಮಾಜದ ವಕೀಲರ ಸಂಘಟನೆ ಮಾಡುತ್ತಿದೆ. ಇನ್ನುಳಿದ ಮುಖಂಡರು ರಾಜ್ಯದ ಮನೆ-ಮನೆಗೆ ತೆರಳಿ ಮನವರಿಕೆ ಮಾಡುವ ಕೆಲಸ ಮಾಡುತ್ತಿದ್ದಾರೆ. ಒಟ್ಟಾರೆಯಾಗಿ ರಾಜ್ಯ ಕಾಂಗ್ರೆಸ್ ಸರ್ಕಾರ ಪಂಚಮಸಾಲಿ ವಿರೋಧಿ ಎಂದು ಸಾಬಿತು ಮಾಡಿದೆ. ಮುಂದೆ ಬರುವ ಚುನಾವಣೆಯಲ್ಲಿ ಸಮಾಜದ ಜನರು ಎಚ್ಚೆತ್ತುಕೊಳ್ಳುತ್ತಾರೆ. ಪಂಚಮಸಾಲಿ ಸಮಾಜದ 12 ಶಾಸಕರಿದ್ದರೂ ಅಧಿವೇಶನದಲ್ಲಿ ಕೇವಲ ಇಬ್ಬರು ಮಾತ್ರ ಚರ್ಚಿಸಿದ್ದಾರೆ ಎಂದು ಕೆಲ ಶಾಸಕರ ವಿರುದ್ಧ ಅಸಮಾಧಾನ ಹೊರ ಹಾಕಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯ ಮಾಂತೇಶ ನಲವಡಿ, ಹಿರಿಯರಾದ ಬಸವರಾಜ ದೇಸಾಯಿ, ಜಿಲ್ಲಾ ಪಂಚಮಸಾಲಿ ಯುವ ಘಟಕದ ಅಧ್ಯಕ್ಷ ಅಯ್ಯಪ್ಪ ಅಂಗಡಿ, ಉಪಾಧ್ಯಕ್ಷ ಬಸವರಾಜ ಗಡ್ಡೆಪ್ಪನವರ, ಈರಮ್ಮ ತಾಳಿಕೋಟಿ, ಬಸವರಾಜ ಮನಗುಂಡಿ, ಸಂತೋಷ ಅಕ್ಕಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

> **ಹಲ್ಲೆಗೊಳಗಾದವರ ಮನೆಗೆ ಭೇಟಿ**
>
> ಮೀಸಲಾತಿ ಹೋರಾಟದ ಸಮಯದಲ್ಲಿ ಗಾಯಗೊಂಡಿದ್ದ ಜಿಲ್ಲೆಯ ಬೂದಪ್ಪ ಅಂಗಡಿ, ಈರಣ್ಣ ಕೊಟಗಿಯವರ, ವಿರೂಪಾಕ್ಷಪ್ಪ ಹೊಸಮನಿ, ಸುರೇಶ ಮಲ್ಲೇಶಪ್ಪ ಕೊಂಡಿಕೊಪ್ಪ, ಮಲ್ಲಿಕಾರ್ಜುನ ಕಿರೆಸೂರ ಅವರ ಮನೆಗೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು. ಇದೇ ವೇಳೆ ಇತ್ತೀಚೆಗೆ ಅನ್ಯಕೋಮಿನವರಿಂದ ಹಲ್ಲೆಗೊಳಗಾಗಿದ್ದ ಸಮಾಜದ ಯುವಕ ಅನಿಲ ಮುಳ್ಳಾಳ ಮನೆಗೂ ಶ್ರೀಗಳು ಭೇಟಿ ನೀಡಿ ಆರೋಗ್ಯ ವಿಚಾರಿಸಿದರು.

### ಸರ್ವ ಜನಾಂಗದ ಶಾಂತಿಯ ತೋಟದಂತೆ ಕಂಗೊಳಿಸುತ್ತಿರುವ ಲಕ್ಕುಂಡಿ ಸ್ತಬ್ಧಚಿತ್ರ । ವಾರ್ತಾ ಇಲಾಖೆಯ ಆಯುಕ್ತರಾದ ಹೇಮಂತ್ ಎಂ.ನಿಂಬಾಳ್ಕರ್ ಮಾಹಿತಿ

## ಕಲ್ಲಿನಲ್ಲಿ ಅರಳಿದ ಶಿಲ್ಪಕಲೆಯ ಅನಾವರಣ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕ ರಾಜ್ಯದ ಪರವಾಗಿ ಗಣರಾಜ್ಯೋತ್ಸವದ ಪಥಸಂಚಲನದಲ್ಲಿ ಪಾಲ್ಗೊಳ್ಳುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪ್ರತಿ ವರ್ಷ ತನ್ನ ವೈಶಿಷ್ಟಪೂರ್ಣ ಸ್ತಬ್ಧಚಿತ್ರಗಳ ಮೂಲಕ ದೇಶದ ಗಮನ ಸೆಳೆಯುತ್ತಿದೆ. ನಮ್ಮ ರಾಜ್ಯವು ವರ್ಷದಿಂದ ವರ್ಷಕ್ಕೆ ಹೊಸ ಮೈಲಿಗಲ್ಲನ್ನು ಸ್ಥಾಪಿಸುತ್ತಲೇ ಸಾಗಿದೆ. ಈ ಬಾರಿ ಲಕ್ಕುಂಡಿಯ ಶಿಲ್ಪಕಲೆಯಿಂದ ಕೂಡಿರುವ ಐತಿಹಾಸಿಕ ದೇವಾಲಯಗಳು ಎಲ್ಲರನ್ನು ಮಂತ್ರಮುಗ್ಧರನ್ನಾಗಿಸಲು ಹೊರಟಿದೆ ಎಂದು ವಾರ್ತಾ ಇಲಾಖೆಯ ಆಯುಕ್ತರಾದ ಹೇಮಂತ್ ಎಂ.ನಿಂಬಾಳ್ಕರ್ ಪತ್ರಿಕಾಗೋಷ್ಠಿಯಲ್ಲಿ ನುಡಿದರು.

ಕರ್ನಾಟಕಕ್ಕೆ ಈ ಬಾರಿಯ ಗಣರಾಜ್ಯೋತ್ಸವದ ಸ್ತಬ್ಧಚಿತ್ರವು ಅತ್ಯಂತ ಸ್ಮರಣೀಯವಾದುದು. ಎಲ್ಲಾ ಧರ್ಮಗಳನ್ನು ಸಮಾನವಾಗಿ ಕಾಣುವ ನಮ್ಮ ರಾಜ್ಯದಲ್ಲಿ ಎಲ್ಲಾ ಧರ್ಮಗಳ



ದೇವಾಲಯಗಳಿವೆ. ಈ ಪೈಕಿ ಐತಿಹಾಸಿಕ ಪಟ್ಟಣವಾದ ಗದಗದ ಲಕ್ಕುಂಡಿಯು ಒಂದಾಗಿದೆ. ಅಹಿಂಸಾವಾದಿಯ ನೆಲೆಬೀಡು. ಶಿಲ್ಪಕಲೆಯ ತೊಟ್ಟಿಲಾದ ಲಕ್ಕುಂಡಿಯಲ್ಲಿ ಶೈವ, ಜೈನ ಮತ್ತು ವೈಷ್ಣವ ದೇವಾಲಯಗಳಿವೆ. ಕಲಾತ್ಮಕತೆಯಿಂದ ಕಂಗೊಳಿಸುವ ಇಲ್ಲಿನ ದೇವಾಲಯಗಳು ಈ ಬಾರಿಯ ಸ್ತಬ್ಧಚಿತ್ರದಲ್ಲಿ ಅವುಗಳ ಪಡಿಯಚ್ಚಿನಂತೆ ಮೂಡಿಬಂದಿವೆ. ರಾಜ್ಯವು ಪ್ರಸ್ತುತ ಪಡಿಸುತ್ತಿರುವ ಈ ಸ್ತಬ್ಧಚಿತ್ರವು ಇದೇ ಜ.26ರಂದು ಎಲ್ಲರ ಮನಸೂರೆಗೊಳ್ಳಲಿದೆ ಎನ್ನುವ ವಿಶ್ವಾಸ ಹೊಂದಿರುವುದಾಗಿ ಆಯುಕ್ತರು ತಿಳಿಸಿದರು.

▶▶ 3ನೇ ಪುಟಕ್ಕೆ

> ವಿಷಯ ಆಯ್ಕೆಯ ಬಳಿಕ ಲಕ್ಕುಂಡಿಯ ಶಿಲ್ಪಕಲೆಯ ವೈಭವವನ್ನು ಅದರ ಪ್ರತಿರೂಪದಂತೆ ಕೆತ್ತುವ ಬೃಹತ್ ಸವಾಲು ಎದುರಾಗಿತ್ತು. ಕರ್ನಾಟಕದ ಬಗೆಗಿನ ಅಭಿಮಾನ, ನಾಡಿನ ಹಿರಿಮೆ ಹಾಗೂ ಸಂಸ್ಕೃತಿಯ ಮಹತ್ವವನ್ನು ಎತ್ತಿ ಹಿಡಿಯುವ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರ ಪ್ರೋತ್ಸಾಹದ ನುಡಿಗಳೇ ಈ ಸವಾಲಿನ ಕೆಲಸಕ್ಕೆ ಮುನ್ನುಡಿ ಬರೆದಿತ್ತು. ಪ್ರವಾಸೋದ್ಯಮ ಮತ್ತು ಗದುಗಿನ ಉಸ್ತುವಾರಿ ಸಚಿವರಾದ ಹೆಚ್.ಕೆ. ಪಾಟೀಲ್ ಅವರ ಮಾರ್ಗದರ್ಶನ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಾರ್ಯದರ್ಶಿಗಳಾದ ಬಿ.ಬಿ. ಕಾವೇರಿ ಅವರ ಸಲಹೆ-ಸೂಚನೆಗಳು ಸ್ತಬ್ಧಚಿತ್ರದ ಕೆಲಸವನ್ನು ಸುಗಮವಾಗಿಸಿತ್ತು ಎಂದು ವಾರ್ತಾ ಇಲಾಖೆಯು ಆಯುಕ್ತರು ಹೇಳಿದರು.

### ನಗರಸಭೆಯಿಂದ ಬೀದಿ ನಾಯಿಗಳ ಸಂತಾನ ಹರಣ ಚಿಕಿತ್ಸೆ

## ಆ್ಯಂಟಿ ರೇಬಿಸ್ ವ್ಯಾಕ್ಸಿನೇಷನ್ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯ ಸಾರ್ವಜನಿಕರಿಗೆ ಬೀದಿ ನಾಯಿಗಳಿಂದ ಉಪಟಳ ಹೆಚ್ಚಾಗಿದ್ದು, ನಗರಸಭೆಗೆ ಬಹಳಷ್ಟು ದೂರುಗಳು ಸ್ವೀಕೃತವಾದ ಕಾರಣ, ಗದಗ-ಬೆಟಗೇರಿ ನಗರಸಭೆ ವತಿಯಿಂದ ಪ್ರಾಣಿ ಜನನ ನಿಯಂತ್ರಣ ಕಾಯ್ದೆ-2023ರ ಪ್ರಕಾರ ಬೀದಿ ನಾಯಿಗಳ ಸಂತಾನ ಹರಣ ಚಿಕಿತ್ಸೆ (ಎಬಿಸಿ) ಹಾಗೂ ಆ್ಯಂಟಿ ರೇಬಿಸ್ ವ್ಯಾಕ್ಸಿನೇಷನ್ (ಎಆರ್‌ವಿ) ಕಾರ್ಯಕ್ರಮ ಅನುಷ್ಠಾನದ ಕಾರ್ಯ ಹಮ್ಮಿಕೊಳ್ಳಲಾಯಿತು.

ಗದಗ – ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಬರುವ ವಾರ್ಡ್ ನಂ 17, 18 ಜವಳಗಲ್ಲಿ ಮುಖ್ಯರಸ್ತೆ ಹಾಗೂ ಮೀನಿನ ಮಾರುಕಟ್ಟೆ



ಭಾಗದಲ್ಲಿ ಬೀದಿ ನಾಯಿಗಳನ್ನು ಹಿಡಿದು ಕಾರ್ಯಾಚರಣೆ ಪ್ರಾರಭಿಸಲಾಯಿತು. 1ನೇ ದಿನಕ್ಕೆ ಒಟ್ಟು 30 ಬೀದಿ ನಾಯಿಗಳನ್ನು ಹಿಡಿದು ಚಿಕಿತ್ಸಾ ಕೇಂದ್ರಕ್ಕೆ ಸಾಗಿಸಲಾಯಿತು.

ಪೌರಾಯುಕ್ತರಾದ ಮಹೇಶ ಪೋತದಾರ ಸದರಿ ಕಾರ್ಯಕ್ಕೆ ಸಾರ್ವಜನಿಕರೆಲ್ಲರೂ ಸಹಕಾರ ನೀಡುವಂತೆ ಕೋರಿದರು.

ವಾರ್ಡ ನಂ.17ರ ಸದಸ್ಯರಾದ ಆಸ್ಮಾ ಮುನ್ನಾಸಾಬ ರೇಶ್ಮಿ ಈ ಸಂದರ್ಭದಲ್ಲಿ ಮಾತನಾಡಿ, ಬಹಳಷ್ಟು ಸಾರ್ವಜನಿಕರು ರಾತಿ ವೇಳೆಯಲ್ಲಿ ಬೀದಿನಾಯಿಗಳ ಉಪಟಳದಿಂದ ತೊಂದರೆ ಅನುಭವಿಸುತ್ತಿದ್ದು, ನಗರಸಭೆಯ ವತಿಯಿಂದ ಹಮ್ಮಿಕೊಳ್ಳಲಾದ ಈ ಕಾರ್ಯ ಶ್ಲಾಘನೀಯ ಎಂದು ಹೇಳಿದರು.

ಈ ಕಾರ್ಯಾಚರಣೆಯಲ್ಲಿ ಬೀದಿ ನಾಯಿಗಳ (ಎಬಿಸಿ ಮತ್ತು ಎಆರ್‌ವಿ) ಕಾರ್ಯಕ್ರಮ ಅನುಷ್ಠಾನದ ಏಜನ್ಸಿದಾರರಾದ ಎನಿಮಲ್ ರೈಟ್ಸ್ ಫಂಡ್, ವಾರ್ಡ್ ನಂ.18ರ ಸದಸ್ಯರಾದ ಜೆ.ಆರ್. ನಮಾಜಿ, ಚಂದ್ರು ಕರಿಸೋಮನಗೌಡ್ರ ಹಾಗೂ ನಗರಸಭೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ) ಆನಂದ ಬದಿ, ಹಿರಿಯ ಆರೋಗ್ಯ ನಿರೀಕ್ಷಕ ಎಂ.ಎಂ. ಮಕಾನದಾರ, ದಫೇದಾರರಾದ ಕೆಂಚಪ್ಪ ಪೂಜಾರ, ಹೇಮೇಶ ಯಟ್ಟಿ ಹಾಗೂ ಇನ್ನಿತರ ಸ್ವಚ್ಛತಾ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

## ಸಂಪಾದಕೀಯ

# ಗೊಬ್ಬರ ಸಬ್ಸಿಡಿಯಲ್ಲೂ ಮೋಸ

ಬೆಳೆವಿಮೆ ಹೆಸರಿನಲ್ಲಿ ರೈತರನ್ನು ವಂಚಿಸುತ್ತಿರುವುದು ಮತ್ತು ಯೋಜನೆಯನ್ನು ಹೇಗೆಲ್ಲಾ ದುರ್ಬಳಕೆ ಮಾಡಿಕೊಂಡು ದಲ್ಲಾಳಿಗಳು ಲಾಭ ಮಾಡಿಕೊಳ್ಳುತ್ತಿದ್ದಾರೆ ಎನ್ನುವುದು ಇತ್ತೀಚಿನ ದಿನಗಳಲ್ಲಿ ಮಾಧ್ಯಮಗಳ ಮೂಲಕ ಬಹಿರಂಗವಾಗುತ್ತಿದೆ.

ಬೆಳೆವಿಮೆ ಯೋಜನೆ ಜಾರಿಯಾದಾಗಿನಿಂದ ಈ ಅಕ್ರಮ ದಂಧೆ ನಡೆಯುತ್ತಿದೆ. ನಿಜವಾಗಿಯೂ ನಷ್ಟ ಅನುಭವಿಸಿದ ರೈತನಿಗೆ ಇತ್ತೀಚಿನ ವರ್ಷಗಳಲ್ಲಿ ಬೆಳೆವಿಮೆ ಬಂದ ಉದಾಹರಣೆಯೇ ಇಲ್ಲ. ಇದರ ಮಧ್ಯೆ ದಲ್ಲಾಳಿಗಳು, ವಿಮೆ ಕಂಪನಿಯ ಏಜೆಂಟರ್ ಹತ್ತಾರು ರೀತಿಯಲ್ಲಿ ಯೋಜನೆಯನ್ನು ದುರ್ಬಳಕೆ ಮಾಡಿಕೊಂಡು ಹಣ ಮಾಡುತ್ತಿದ್ದಾರೆ. ಅನ್ನ ಕೊಡುವ ರೈತ ಮುಗಿಲಿನತ್ತ ನೋಡುವುದಷ್ಟೆ ಕಾಯಕವಾಗಿದೆ.

ಇದರ ಮಧ್ಯೆ ರಸಗೊಬ್ಬರವೂ ಈಗ ಕಳ್ಳರ ಪಾಲಾಗುತ್ತಿದೆ. ರಸಗೊಬ್ಬರ ಕಂಪನಿಗಳು ಕಾಳಸಂತೆಯಲ್ಲಿ ಕೈಗಾರಿಕೆಗಳಿಗೆ ರಸಗೊಬ್ಬರವನ್ನು ಮಾರಾಟ ಮಾಡಿಕೊಂಡು ಕೃತಕ ಅಭಾವ ಸೃಷ್ಟಿಗೆ ಕಾರಣರಾಗುತ್ತಿದ್ದಾರೆ. ಇಷ್ಟು ದಿನ ರಸಗೊಬ್ಬರ ಮಾರಾಟಗಾರರು ಕೃತಕ ಅಭಾವ ಸೃಷ್ಟಿಸಿ, ಕಾಳಸಂತೆಯಲ್ಲಿ ಹೆಚ್ಚಿನ ಬೆಲೆಗೆ ರಸಗೊಬ್ಬರ ಮಾರಾಟ ಮಾಡುತ್ತಿದ್ದರು. ಈಗ ರಸಗೊಬ್ಬರ ಉತ್ಪಾದಿಸುವ ಕಂಪನಿಗಳೆ ನೇರವಾಗಿ ಕೈಗಾರಿಕೆಗಳಿಗೆ ಮಾರಾಟ ಮಾಡಿಕೊಂಡು ರೈತರಿಗೆ ರಸಗೊಬ್ಬರ ಸಿಗದಂತೆ ಮಾಡುತ್ತಿದ್ದಾರೆ.

ಕರ್ನಾಟಕದಲ್ಲಿಯೇ ಇಂಥ ಚಟುವಟಿಕೆ ನಡೆಯುತ್ತಿದ್ದರೂ ಸರಕಾರ ಅದಕ್ಕೆ ಕಡಿವಾಣ ಹಾಕುತ್ತಿಲ್ಲ. ಪ್ರಸಕ್ತ ವರ್ಷ ಮುಂಗಾರು ಹಿಂಗಾರು ಉತ್ತಮವಾಗಿರವುದರಿಂದ ರೈತರು ಈ ಬಾರಿ ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದಾರೆ. ಮುಂದಿನ ಮುಂಗಾರು ಆಗಮನವನ್ನು ಅತ್ಯುತ್ಸಾಹದಿಂದ ಎದುರು ನೋಡುತ್ತಿದ್ದಾರೆ. ಸಹಜವಾಗಿ 2025ರ ಮುಂಗಾರ ಸಂದರ್ಭದಲ್ಲಿ ಬೀಜ ರಸಗೊಬ್ಬರಕ್ಕೆ ಬೇಡಿಕೆ ಹೆಚ್ಚಾಗಲಿದೆ.

ಹೀಗೆ ಕಾಳಸಂತೆಯಲ್ಲಿ ರಸಗೊಬ್ಬರ ಮಾರಾಟವಾದರೆ ಭವಿಷ್ಯದಲ್ಲಿ ರೈತರಿಗೆ ರಸಗೊಬ್ಬರ ಕೊರತೆ ಎದುರಾಗುವದು ನಿಶ್ಚಿತವಾಗಿದೆ. ಸರಕಾರ ಈಗಲೇ ಎಚ್ಚೆತ್ತು, ರಸಗೊಬ್ಬರ ಸಬ್ಸಿಡಿಯನ್ನು ಸಮರ್ಕವಾಗಿ ವಿತರಿಸುವ ಜೊತೆಗೆ ಕಾಳಸಂತೆಯಲ್ಲಿ ರಸಗೊಬ್ಬರ ಮಾರಾಟ ಆಗದಂತೆ ಎಚ್ಚರಿಕೆ ವಹಿಸಬೇಕಾಗಿದೆ.

ಶಿವಮಂದಿರ ನೂತನ ಕಟ್ಟಡದ ಉದ್ಘಾಟನಾ ಧರ್ಮ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ರಚನಾತ್ಮಕ ಸತ್ಕಾರ್ಯಗಳಿಂದ ಅಭಿವೃದ್ಧಿ ಸಾಧ್ಯ

■ವಿಜಯಸಾಕ್ಷಿ ಸುದ್ದಿ, ರಿಪ್ಪನ್‌ಪೇಟೆ

ಮಾನವನ ಬಾಳು ಉಜ್ವಲಗೊಳ್ಳಲು ನಿರಂತರ ಶ್ರಮ ಮತ್ತು ಪ್ರಯತ್ನ ಬೇಕು. ಕ್ರಿಯಾಶೀಲ ಜೀವನ ಶ್ರೇಯಸ್ಸಿಗೆ ಅಡಿಪಾಯ. ರಚನಾತ್ಮಕ ಸತ್ಕಾರ್ಯಗಳಿಂದ ಮಾತ್ರ ಸಮಾಜ ಮತ್ತು ಧರ್ಮ ಬಲಗೊಳ್ಳಲು ಸಾಧ್ಯವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ಶಿವಮಂದಿರ ನೂತನ ಕಟ್ಟಡದ ಉದ್ಘಾಟನಾ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.



ಸಮಯ, ಸ್ನೇಹ ಮತ್ತು ಆರೋಗ್ಯ ಇವುಗಳಿಗೆ ಬೆಲೆ ಕಟ್ಟಲಾಗದು. ಬಡತನ ಮನುಷ್ಯನಿಗೆ ಇರಬೇಕೇ ಹೊರತು ಮನಸ್ಸಿಗೆ ಇರಬಾರದು. ಶ್ರೀಮಂತಿಕೆ ಮನಸ್ಸಿಗಿರಬೇಕೇ ಹೊರತು ಮನುಷ್ಯನಿಗಿರಬಾರದು. ವೀರಶೈವ ಧರ್ಮ, ಕಾಯಕ ತತ್ವಕ್ಕೆ ಬಹಳ ಮಹತ್ವ ಕೊಟ್ಟಿದೆ. ಕಾಯಕವೇ ಕಳಾ ಚೈತನ್ಯವೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಮತ್ತು ಕಾಯಕವೇ ಕೈಲಾಸವೆಂದು ಬಸವಣ್ಣನವರು ಹೇಳಿದ್ದಾರೆ.

ಗುಣಾತ್ಮಕ ಚಿಂತನೆಗಳು ಶ್ರೇಯಸ್ಸಿಗೆ ಮೂಲ. ಮಾನಸಿಕವಾಗಿ, ದೈಹಿಕವಾಗಿ ಸದೃಢನಾಗಿರುವ ವ್ಯಕ್ತಿ ಯಾರನ್ನೂ ಎಂದೂ ಅವಲಂಬಿಸಬೇಕಾಗಿಲ್ಲ. ಎಲ್ಲಾ ಕಡೆ ತಲೆ ಎತ್ತಿ ನಿಲ್ಲುವವನು ದೊಡ್ಡ ಮನುಷ್ಯ ಅಲ್ಲ. ಎಲ್ಲಿ ತಲೆ ತಗ್ಗಿಸಿ ನಿಲ್ಲಬೇಕು ಎಂದು ಗೊತ್ತಿರುವವನೇ ನಿಜವಾಗಿ ದೊಡ್ಡ ಮನುಷ್ಯ. ರಿಪ್ಪನ್‌ಪೇಟೆ ವೀರಶೈವ ಸಮಾಜ ಬಾಂಧವರು 'ಶಿವಮಂದಿರ' ನಿರ್ಮಾಣ ಮಾಡುವುದರ ಮೂಲಕ ಗೌರವ ತಂದಿದ್ದಾರೆ. ಈ ಸಭಾ ಭವನದ ನಿರ್ಮಾಣಕ್ಕೆ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರು ಬಹಳಷ್ಟು ಸಹಕಾರ ಕೊಟ್ಟಿರುವುದು ಸಮಾಧಾನದ ಸಂಗತಿ. ಭವಿಷ್ಯತ್ತಿನಲ್ಲಿ ಇನ್ನಷ್ಟು ಜನಹಿತಾತ್ಮಕ ಅಭಿವೃದ್ಧಿ ಕಾರ್ಯಗಳು ನಡೆಯಲೆಂದು ಶ್ರೀ ರಂಭಾಪುರಿ ಜಗದ್ಗುರುಗಳು ಹಾರೈಸಿದರು.

ಶ್ರೀ ಬಸವೇಶ್ವರ ವೀರಶೈವ ಸಮಾಜದ ಅಧ್ಯಕ್ಷ ಡಾ. ಕೆ.ಬಿ. ಕಮಲಾಕರಪ್ಪ ಅಧ್ಯಕ್ಷತೆ ವಹಿಸಿ ಮಾತನಾಡಿ, ಮನುಷ್ಯ ಜೀವನದಲ್ಲಿ ಹಣ ಗಳಿಕೆ ಒಂದೇ ಗುರಿಯಲ್ಲ. ಅದರೊಂದಿಗೆ ಸಂಸ್ಕೃತಿ ಮತ್ತು ಆದರ್ಶಗಳನ್ನು ಬೆಳೆಸುವ ನಿಟ್ಟಿನಲ್ಲಿ ಶ್ರಮಿಸಬೇಕು. ರಿಪ್ಪನ್‌ಪೇಟೆ ವೀರಶೈವ ಸಮಾಜ ಬಾಂಧವರು ಶಿವಮಂದಿರ ನಿರ್ಮಿಸಿ ಇಂದು ಉದ್ಘಾಟಿಸುತ್ತಿರುವುದು ಸಂತೋಷದ ಸಂಗತಿ ಎಂದರು.

ನೇತೃತ್ವ ವಹಿಸಿದ ಶ್ರೀಮದ್ರಂಭಾಪುರಿ ಖಾಸಾ ಶಾಖಾ ಮಳಲಿ ಸಂಸ್ಥಾನ ಮಠದ ಡಾ. ನಾಗಭೂಷಣ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಶಿವಮಂದಿರ ಇತಿಹಾಸದಲ್ಲಿ ಇಂದು ಅವಿಸ್ಮರಣೀಯ ದಿನ. ಸಕಲ ಸದ್ಭಕ್ತರ ಸಹಕಾರ ಮತ್ತು ಅಭಿಮಾನದಿಂದಾಗಿ ಬಹು ದೊಡ್ಡ ಕಾರ್ಯ ಮಾಡಿದ್ದು ಮರೆಯಲಾಗದು. ಶಿವಮಂದಿರ ಉದ್ಘಾಟನೆಗಾಗಿ ಶ್ರೀ ರಂಭಾಪುರಿ ಜಗದ್ಗುರುಗಳವರನ್ನು ಬರಮಾಡಿಕೊಂಡು ಮತ್ತೊಂದು ದಾಖಲೆಯನ್ನು ನಿರ್ಮಿಸಿದ ಶ್ರೇಯಸ್ಸು ತಮ್ಮದಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಶಾಸಕ, ಅರಣ್ಯ ಕೈಗಾರಿಕಾ ನಿಗಮದ ಅಧ್ಯಕ್ಷ ಗೋಪಾಲಕೃಷ್ಣ ಬೇಳೂರು, ಡಿಸಿಸಿ ಬ್ಯಾಂಕ್ ಅಧ್ಯಕ್ಷ ಡಾ. ಆರ್.ಎಂ. ಮಂಜುನಾಥಗೌಡ್ರು, ಮಾಜಿ ಸಚಿವ ಹರತಾಳು ಹಾಲಪ್ಪ, ಗ್ರಾ.ಪಂ ಅಧ್ಯಕ್ಷೆ ಧನಲಕ್ಷ್ಮಿ ಗಂಗಾಧರ್ ಭಾಗವಹಿಸಿದ್ದರು. ಶ್ರೀ ಬಸವೇಶ್ವರ ವೀರಶೈವ ಸಮಾಜದ ಹಿರಿಯ ಉಪಾಧ್ಯಕ್ಷ ಜಿ.ಎಂ. ದುಡರಾಜಪ್ಪಗೌಡ, ಉಪಾಧ್ಯಕ್ಷ ಎಂ.ಆರ್. ಶಾಂತವೀರಪ್ಪಗೌಡ, ಅ.ಭಾ.ವೀ. ಮಹಾಸಭೆ ಹೊಸನಗರ ತಾಲೂಕು ಘಟಕದ ಅಧ್ಯಕ್ಷ ಎಂ.ಎಸ್. ಉಮೇಶ್ ಹಾಗೂ ಗ್ರಾ.ಪಂ ಉಪಾಧ್ಯಕ್ಷರು ಹಾಗೂ ಎಲ್ಲ ಸದಸ್ಯರು ಉಪಸ್ಥಿತರಿದ್ದರು.

ಸಮಾರಂಭ ಉದ್ಘಾಟಿಸಿದ ಸಂಸದ ಬಿ.ವೈ. ರಾಘವೇಂದ್ರ ಮಾತನಾಡಿ, ಮನುಷ್ಯ ಮನಸ್ಸು ಮಾಡಿದರೆ ಏನೆಲ್ಲ ಸಾಧನೆಯನ್ನು ಮಾಡಲು ಸಾಧ್ಯ. ದೇಹವನ್ನು ದುಡಿಮೆಗೆ, ಮನಸ್ಸನ್ನು ಭಗವಂತನಿಗೆ ಅರ್ಪಿಸಿ ನಡೆದಾಗ ಜೀವನ ಸಾರ್ಥಕ. ಬಿ.ಎಸ್. ಯಡಿಯೂರಪ್ಪನವರು ಈ ಸಭಾಭವನ ನಿರ್ಮಾಣಕ್ಕೆ ಅಮೂಲ್ಯ ಕೊಡುಗೆ ಕೊಟ್ಟಿದ್ದಾರೆ. ವೀರಶೈವ ಸಮಾಜ ಬಾಂಧವರು ಸಾಮರಸ್ಯ ಸದ್ಭಾವನೆಗಳನ್ನು ಹೊಂದಿ ಸಮಾಜ ಕಟ್ಟಿ ಬೆಳೆಸುವ ಮತ್ತು ರಚನಾತ್ಮಕ ಕಾರ್ಯಗಳನ್ನು ಮಾಡಿದ್ದು ಹೆಮ್ಮೆಯ ಸಂಗತಿ. ಶ್ರೀ ರಂಭಾಪುರಿ ಜಗದ್ಗುರುಗಳವರು ಧರ್ಮ, ಸಂಸ್ಕೃತಿ, ಪರಂಪರೆ, ಕಾಯಕ ಜೀವನದ ಶ್ರೇಯಸ್ಸಿಗಾಗಿ ಸದಾ ಶ್ರಮಿಸುತ್ತಿರುವುದು ಭಕ್ತ ಸಂಕುಲಕ್ಕೆ ಹರುಷ ತಂದಿದೆ ಎಂದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದ ಸಾರ್ವಜನಿಕ ಆಸ್ಪತ್ರೆ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವಿವಿಧ ತಜ್ಞರ ಹುದ್ದೆಗಳಿಗೆ ಸರ್ಕಾರದ ಆದೇಶ ಪ್ರಕಾರ ಕರೆ ಆಧಾರಿತ ವೈದ್ಯಕೀಯ ಸೇವೆಯನ್ನು ನೀಡಲು ಅರ್ಹ ತಜ್ಞ ವೈದ್ಯರುಗಳಿಂದ ಅರ್ಜಿ ಅಹ್ವಾನಿಸಲಾಗಿದೆ. ಸದರಿ ತಜ್ಞ ವೈದ್ಯರುಗಳಿಗೆ ಲಭ್ಯ ಮಾರ್ಗಸೂಚಿಯಂತೆ ನಿಗದಿಪಡಿಸಿದ ಪ್ರತಿ ದಿನದ ದರದಂತೆ ಸಂಚಿತ ವೇತನವನ್ನು ಎಬಿಎಆರ್‌ಕೆ ನಿಧಿಯಿಂದ ಪಾವತಿಸಲಾಗುವುದು. ಇಚ್ಛೆಯುಳ್ಳ ಅಭ್ಯರ್ಥಿಗಳು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಕೊಠಡಿ ಸಂ-101, ಜಿಲ್ಲಾಡಳಿತ ಭವನ, ಹುಬ್ಬಳ್ಳಿ ರಸ್ತೆ, ಗದಗ ಇಲ್ಲಿಗೆ ತಮ್ಮ ಬಯೋಡೆಟಾ ಮತ್ತು ವಿದ್ಯಾರ್ಹತೆಗೆ ಸಂಬಂಧಿಸಿದ ಎಲ್ಲಾ ಮೂಲ ದಾಖಲಾತಿಗಳ ದ್ವಿಪ್ರತಿಗಳೊಂದಿಗೆ ಜನವರಿ 27 ರಂದು ನೇರ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಕೊಠಡಿ ಸಂ-101, ಜಿಲ್ಲಾಡಳಿತ ಭವನ, ಹುಬ್ಬಳ್ಳಿ ರಸ್ತೆ, ಗದಗ ಈ ಕಚೇರಿಗೆ ಸಂಪರ್ಕಿಸಬಹುದಾಗಿದೆ.

# ಪತ್ರಕರ್ತ ದಿಗಂಬರ ಪೂಜಾರರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇತ್ತೀಚೆಗೆ ತುಮಕೂರಿನಲ್ಲಿ ನಡೆದ ರಾಜ್ಯ ಪತ್ರಕರ್ತರ 39ನೇ ಸಮ್ಮೇಳನದಲ್ಲಿ ಕೆಯುಡಬ್ಲೂಜೆ ಕೊಡಮಾಡುವ ಪ್ರತಿಷ್ಠಿತ ಜಿ.ನಾರಾಯಣಸ್ವಾಮಿ(ಅತ್ಯುತ್ತಮ ಗ್ರಾಮಾಂತರ ವರದಿಗಾಗಿ) ಪ್ರಶಸ್ತಿಗೆ ಭಾನರಾಗಿ ಪ್ರಶಸ್ತಿ ಸ್ವೀಕರಿಸಿದ ಪಟ್ಟಣದ ಪತ್ರಕರ್ತ ದಿಗಂಬರ ಪೂಜಾರ ಅವರನ್ನು ಶ್ರೀ ನೀಲಪ್ಪ ಗುಡ್ಡಪ್ಪ ಶಿರಹಟ್ಟಿ ಸೇವಾ ಸಮಿತಿ ಸಂಸ್ಥಾಪಕರಾದ ಕರಿಯಪ್ಪ ಶಿರಹಟ್ಟಿ, ಕರ್ನಾಟಕ ದಲಿತ ಯುವ ಮುನ್ನಡೆ ರಾಜ್ಯಾಧ್ಯಕ್ಷ ಫಕೀರಪ್ಪ ಭಜಕ್ಕನವರ ಹಾಗೂ ಅವರ ಸಮಾನ ಮನಸ್ಕ ವೇದಿಕೆಯ ವತಿಯಿಂದ ಸನ್ಮಾನಿಸಲಾಯಿತು.

ಈ ವೇಳೆ ಮಾತನಾಡಿದ ಹಿರಿಯ ಸಾಹಿತಿ ಪೂರ್ಣಾಜಿ ಖರಾಟೆ, ದಿಗಂಬರ ಪೂಜಾರರ ಬದ್ಧತೆ, ಪ್ರಾಮಾಣಿಕತೆ, ಸರಳತೆ ಅನುಕರಣೀಯ. ಅವರು ಎಲ್ಲರೊಂದಿಗೆ ಸ್ನೇಹಭಾವದಿಂದ ಇರುವ ವ್ಯಕ್ತಿಯಾಗಿದ್ದು, ಪತ್ರಿಕಾರಂಗದ ಪ್ರತಿಷ್ಠಿತ ಪ್ರಶಸ್ತಿಗೆ ಭಾಜನರಾಗಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

ಅಧ್ಯಕ್ಷತೆ ವಹಿಸಿದ್ದ ಬಂಡಾಯ ಸಾಹಿತಿ ಸಿ.ಜಿ. ಹಿರೇಮಠ ಮಾತನಾಡಿ, ದಿಗಂಬರ ಪೂಜಾರರು ತಮ್ಮ ಜೀವನದಲ್ಲಿ ಎದುರಾದ ಹಲವು ಸವಾಲುಗಳನ್ನು ಧೈರ್ಯದಿಂದ ಎದುರಿಸಿ ಅನೇಕ ವರ್ಷಗಳಿಂದ ಜನರ ಸಂಕಷ್ಟಗಳಿಗೆ ಧನಾತ್ಮಕವಾಗಿ ಸ್ಪಂದಿಸುವ ಅಪರೂಪದ ವ್ಯಕ್ತಿತ್ವ ಹೊಂದಿದ್ದು, ಅವರಿಗೆ ಪ್ರಶಸ್ತಿ ದೊರಕಿರುವದು ಎಲ್ಲರಿಗೂ ಹೆಮ್ಮೆಯ ಸಂಗತಿಯಾಗಿದೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ದಿಗಂಬರ ಪೂಜಾರ, ಉತ್ತಮ ಸಮಾಜ ನಿರ್ಮಿಸುವಲ್ಲಿ ಪತ್ರಕರ್ತರ ಜವಾಬ್ದಾರಿ ಬಹಳ ಮುಖ್ಯವಾದದ್ದು ಎಂದರು. ನಿವೃತ್ತ ಶಿಕ್ಷಣ ಸಂಯೋಜಕರಾದ ಎನ್.ಆರ್. ಸಾತಪುತೆ, ಫಕ್ಕೀರೇಶ ಡಿ.ಬಿ., ಕರಿಯಪ್ಪ ಶಿರಹಟ್ಟಿ ಮಾತನಾಡಿದರು.

ಅತಿಥಿಗಳಾಗಿ ಎಮ್.ಎನ್. ಬಾಡಗಿ, ಎಸ್.ಬಿ. ಲಕ್ಷ್ಮೇಶ್ವರ, ಫಕೀರಪ್ಪ ಶಿಗ್ಲಿ, ಮಂಜುನಾಥ್ ಹರಿಜನ, ಗುಡ್ಡಪ್ಪ ಮತ್ತೂರ, ರಾಜೇಶ್ ಕಮತದ, ಆನಂದ ತಳಗೇರಿ, ಡಿ.ಕೆ. ಅನೂಪ್ ಹಾಗೂ ವೇದಿಕೆ ಸದಸ್ಯರು ಹಾಜರಿದ್ದರು. ಮಂಜುನಾಥ ದೊಡ್ಡಮನಿ ಸ್ವಾಗತಿಸಿದರು, ಬಸವರಾಜ ಯರಗುಪ್ಪಿ ನಿರೂಪಿಸಿದರು.

# ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ




ಉನ್ನತ ಶಿಕ್ಷಣದಲ್ಲಿ ಕರ್ನಾಟಕ ಸರ್ಕಾರದ ಮಹಾಕಾಂಕ್ಷಿ ಯೋಜನೆಯಾದ 'ಪ್ರೇರಣಾ ಮೆಂಟರ್‌ಶಿಪ್' ಕಾರ್ಯಕ್ರಮದಡಿ ಸರ್ಕಾರಿ ಪಾಲಿಟೆಕ್ನಿಕ್ ಗದಗ ಸಂಸ್ಥೆಯಲ್ಲಿ ಬುಧವಾರ ವಿಷಯ ತಜ್ಞರಿಂದ ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸ ಮಾಲಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಸಂಪನ್ಮೂಲ ವ್ಯಕ್ತಿಗಳಾಗಿ ವಿಷಯ ತಜ್ಞರಾದ ಹುಬ್ಬಳ್ಳಿಯ ಪ್ರೊ. ಜಿ.ವಿ. ಡೋಣುರಮಠ ಸಾಫ್ಟ್ ಸ್ಕಿಲ್ಸ್ ಹಾಗೂ ವ್ಯಕ್ತಿತ್ವ ವಿಕಸನದ ಕುರಿತು ವಿದ್ಯಾರ್ಥಿಗಳಿಗೆ ವಿಶೇಷ ಉಪನ್ಯಾಸವನ್ನು ನೀಡಿದರು. 'ಪ್ರೇರಣಾ ಮೆಂಟರ್‌ಶಿಪ್' ಕಾರ್ಯಕ್ರಮದಡಿ ಪಠ್ಯ ವಿಷಯಗಳ ಜೊತೆಗೆ ಇತರೆ ವಿವಿಧ ಉಪಯುಕ್ತ ವಿಷಯಗಳನ್ನು ಅರಿತುಕೊಳ್ಳಲು ಸದರಿ ಯೋಜನೆಯು ತುಂಬಾ ಉಪಯೋಗವಾಗಿದೆ ಎಂದು ವಿದ್ಯಾರ್ಥಿಗಳು ಮೆಚ್ಚುಗೆಯ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಚಾರ್ಯ ಭರಮಪ್ಪ ಬಡಪ್ಪವರ ವಹಿಸಿದ್ದರು. ಕಾರ್ಯಕ್ರಮದಲ್ಲಿ ವಿಭಾಗಾಧಿಕಾರಿ ಜೈನಾಬಿ, ಕೊಟ್ರಗೌಡ, ಶಿವಾನಂದ ಪೂಜಾರ, ಮಂಗಳಗೌರಮ್ಮ ಶಿವಸಿಂಪಿಗೇರ ಹಾಗೂ ಎಲ್ಲ ಬೋಧಕ ಸಿಬ್ಬಂದಿಗಳು ಹಾಜರಿದ್ದರು. ಜಯಲಕ್ಷ್ಮೀ ಹರ್ಲಾಪೂರ ಸ್ವಾಗತಿಸಿದರು, ವಿದ್ಯಾಶ್ರೀ ಹೂಗಾರ ವಂದಿಸಿದರು.

# ಜಮ್ಮು ಕಾಶ್ಮೀರ । ನಿಗೂಢ ಕಾಯಿಲೆಗೆ 17 ಜನರು ಬಲಿ; ಕಂಟೈನ್ಮೆಂಟ್ ವಲಯ ರಚನೆ

■ವಿಜಯಸಾಕ್ಷಿ ಸುದ್ದಿ, ಜಮ್ಮು ಕಾಶ್ಮೀರ

ಜಮ್ಮು ಕಾಶ್ಮೀರದ ರಾಜೌರಿ ಜಿಲ್ಲೆಯ ಬಾಧಾಲ್ ಗ್ರಾಮದಲ್ಲಿ 17 ಜನರು ನಿಗೂಢವಾಗಿ ಸಾವನ್ನಪ್ಪಿದ ನಂತರ ರಾಜ್ಯದ ಅಧಿಕಾರಿಗಳು ಬುಧವಾರ ಅದನ್ನು ಕಂಟೈನ್ಮೆಂಟ್ ವಲಯವೆಂದು ಘೋಷಿಸಿದ್ದಾರೆ ಎಂದು ದಿ ಹಿಂದೂ ವರದಿ ಮಾಡಿದೆ. ಡಿಸೆಂಬರ್ 7 ರಿಂದ, ನಾಲ್ಕು ಹಂತಗಳಲ್ಲಿ ಗ್ರಾಮ ಮೂರು ಪರಸ್ಪರ ಸಂಬಂಧ ಹೊಂದಿರುವ ಕುಟುಂಬಗಳ ಸದಸ್ಯರು ಸಾವಿಗೀಡಾಗಿದ್ದು, ಇದರಲ್ಲಿ 13 ಮಂದಿ ಮಕ್ಕಳಾಗಿದ್ದಾರೆ. ಜಮ್ಮು ಕಾಶ್ಮೀರ

ಈ ನಡುವೆ, ಇಜಾಜ್ ಅಹ್ಮದ್ ಎಂದು ಗುರುತಿಸಲಾದ 24 ವರ್ಷದ ವ್ಯಕ್ತಿಯನ್ನು ಮಂಗಳವಾರ ಸಂಜೆ ಗಂಭೀರ ಸ್ಥಿತಿಯಲ್ಲಿ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪಿಟಿಐ ವರದಿ ಮಾಡಿದೆ. ಬುಧವಾರದಂದು ಅಧಿಕಾರಿಗಳು ಬಾಧಾಲ್ ಅನ್ನು ಮೂರು ಕಂಟೈನ್ಮೆಂಟ್ ವಲಯಗಳಾಗಿ ವಿಂಗಡಿಸಿದ್ದು, ಮೊದಲನೆ ವಲಯದಲ್ಲಿ ಸಾವುಗಳು ಸಂಭವಿಸಿದ ಎಲ್ಲಾ ಕುಟುಂಬಗಳನ್ನು ಒಳಗೊಂಡಿದೆ ಎಂದು ವರದಿ ಉಲ್ಲೇಖಿಸಿದೆ.

ನರಮಂಡಲದ ಮೇಲೆ ಕಾರ್ಯನಿರ್ವಹಿಸುವ ವಿಷದಿಂದಾಗಿ (ಓಜಣಡಿಠಣಂಥುಟಿ) ಸಾವುಗಳು ಸಂಭವಿಸಿವೆ ಎಂದು ವೈದ್ಯರು ಹೇಳಿದ್ದಾರೆ. ಆದರೂ, ವ್ಯಾಪಕ ಪರೀಕ್ಷೆಯ ಹೊರತಾಗಿಯೂ ಇದಕ್ಕೆ ಸ್ಪಷ್ಟ ಕಾರಣವನ್ನು ತಜ್ಞರು ನೀಡಿಲ್ಲ.

"ಪೀಡಿತ ಕುಟುಂಬಗಳ ಮನೆಗಳನ್ನು ಮುಚ್ಚಲಾಗುತ್ತದೆ ಮತ್ತು ಗೊತ್ತುಪಡಿಸಿದ ಅಧಿಕಾರಿಗಳಿಂದ ಅನುಮತಿ ಪಡೆಯದ ಹೊರತು, ಅವರ ಕುಟುಂಬ ಸದಸ್ಯರು ಸೇರಿದಂತೆ ಎಲ್ಲಾ ವ್ಯಕ್ತಿಗಳಿಗೆ



ಪ್ರವೇಶವನ್ನು ಸಂಪೂರ್ಣವಾಗಿ ನಿರ್ಬಂಧಿಸಲಾಗುತ್ತದೆ" ಎಂದು ಹೆಚ್ಚುವರಿ ಜಿಲ್ಲಾ ಮ್ಯಾಜಿಸ್ಟ್ರೇಟ್ (ರಾಜೌರಿ) ರಾಜೀವ್ ಕುಮಾರ್ ಖಜುರಿಯಾ ಹೊರಡಿಸಿದ ಆದೇಶದಲ್ಲಿ ತಿಳಿಸಿದ್ದಾರೆ.

ಎರಡನೇ ವಲಯವನ್ನು ಸತ್ತವರೊಂದಿಗೆ ನಿಕಟ ಸಂಪರ್ಕದಲ್ಲಿದ್ದ ನಿವಾಸಿಗಳ ಮನೆಗಳನ್ನು ಒಳಗೊಂಡಿದೆ. ಅವರ ಮೇಲ್ವಿಚಾರಣೆಗಾಗಿ ರಾಜೌರಿಯಲ್ಲಿರುವ ಸರ್ಕಾರಿ ವೈದ್ಯಕೀಯ ಕಾಲೇಜಿಗೆ ಸ್ಥಳಾಂತರಿಸಲಾಗುವುದು ಎಂದು ವರದಿ ಹೇಳಿದೆ. ಮೂರನೇ ವಲಯವು ಇತರ ಎಲ್ಲಾ ಮನೆಗಳನ್ನು ಒಳಗೊಂಡಿದೆ. ಕಂಟೈನ್ಮೆಂಟ್ ವಲಯಗಳೊಳಗಿನ ಕುಟುಂಬಗಳಿಗೆ ನೀಡಲಾಗುವ ಎಲ್ಲಾ ಊಟಗಳನ್ನು ಅಧಿಕಾರಿಗಳು ಮೇಲ್ವಿಚಾರಣೆ ಮಾಡುತ್ತಾರೆ.

ಪ್ರೋಟೋಕಾಲ್‌ಗಳ ಅನುಸರಣೆಯನ್ನು ಖಚಿತಪಡಿಸಿಕೊಳ್ಳಲು ಪೊಲೀಸ್ ಸಿಬ್ಬಂದಿಯನ್ನು ಸಹ ನಿಯೋಜಿಸಲಾಗುತ್ತದೆ.

"ಸೋಂಕು ಮತ್ತಷ್ಟು ಹರಡುವುದನ್ನು ತಡೆಗಟ್ಟುವ ಸಲುವಾಗಿ ಈ ಕಂಟೈನ್ಮೆಂಟ್ ವಲಯಗಳ ವ್ಯಾಪ್ತಿಯಲ್ಲಿ ಎಲ್ಲಾ ಸಾರ್ವಜನಿಕ ಮತ್ತು ಖಾಸಗಿ ಕೂಟಗಳನ್ನು ಇಲ್ಲಿ ನಿಷೇಧಿಸಲಾಗಿದೆ" ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಅಮನೆಗಳಲ್ಲಿ ಲಭ್ಯವಿರುವ ಯಾವುದೇ ಇತರ ಆಹಾರ ಪದಾರ್ಥಗಳನ್ನು ಸೇವಿಸುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ." ಎಂದು ಆದೇಶಿಸಲಾಗಿದೆ.

ಜಮ್ಮು ಕಾಶ್ಮೀರ

ಜಿಲ್ಲಾ ಅಧಿಕಾರಿಗಳು ಎಲ್ಲಾ ಆಹಾರ ಮತ್ತು ನೀರಿನ ಸರಬರಾಜುಗಳನ್ನು ತಕ್ಷಣ ಬದಲಾಯಿಸಲು ಆದೇಶಿಸಿದ್ದಾರೆ. ಸಾವುಗಳು ನಡೆದ ಮನೆಗಳಲ್ಲಿರುವ ಎಲ್ಲಾ ಖಾದ್ಯ ವಸ್ತುಗಳನ್ನು ಮುಟ್ಟುಗೋಲು ಹಾಕಿಕೊಂಡಿದ್ದಾರೆ.

ಮಂಗಳವಾರದಂದು ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಗ್ರಾಮಕ್ಕೆ ಭೇಟಿ ನೀಡಿ ತನಿಖೆ ನಡೆಯುತ್ತಿದೆ ಎಂದು ನಿವಾಸಿಗಳಿಗೆ ಭರವಸೆ ನೀಡಿದ್ದಾರೆ. "ಕೇಂದ್ರವು ಮಾದರಿಗಳನ್ನು ಸಂಗ್ರಹಿಸಿದ್ದು, ತನಿಖೆಗಾಗಿ ತಂಡವನ್ನು ಸಹ ನಿಯೋಜಿಸಿದೆ" ಎಂದು ಮುಖ್ಯಮಂತ್ರಿ ಹೇಳಿರುವುದಾಗಿ ದಿ ಹಿಂದೂ ವರದಿ ಮಾಡಿದೆ.

"ನಾಗರಿಕ ಆಡಳಿತ, ಪೊಲೀಸ್ ಮತ್ತು ಭಾರತ ಸರ್ಕಾರದ ಜಂಟಿ ಪ್ರಯತ್ನಗಳು ಏನಾಯಿತು ಎಂಬುದರ ಕುರಿತು ಎಲ್ಲಾ ಪ್ರಶ್ನೆಗಳಿಗೆ ಉತ್ತರಗಳನ್ನು ಕಂಡುಕೊಳ್ಳುತ್ತವೆ ಎಂದು ನಾನು ಎಲ್ಲರಿಗೂ ಭರವಸೆ ನೀಡಲು ಬಯಸುತ್ತೇನೆ." ಎಂದು ಸಿಎಂ ಹೇಳಿದ್ದಾರೆ.

ಘಟನೆಯು ಮೊದಲ ಬಾರಿಗೆ ಡಿಸೆಂಬರ್ 7 ರಂದು ಸಮುದಾಯಿಕ ಭೋಜನದ ನಂತರ ಒಂದೇ ಕುಟುಂಬದ ಏಳು ಸದಸ್ಯರು ಅಸ್ವಸ್ಥರಾಗಿದ್ದರು. ಇದರ ನಂತರ ಈ ವಿಷಯ ಬೆಳಕಿಗೆ ಬಂದಿದ್ದು, ಈ ವೇಳೆ ಅವರಲ್ಲಿ ಐದು ಮಂದಿ ಸಾವನ್ನಪ್ಪಿದ್ದರು.

ಡಿಸೆಂಬರ್ 2 ರಂದು ಫಜಲ್ ಹುಸೇನ್ ಎಂಬ ನಿವಾಸಿಯ ಮನೆಯಲ್ಲಿ ಮದುವೆಯ ಹಬ್ಬದ ಭಾಗವಾಗಿ ಸಮುದಾಯಿಕ ಭೋಜನವನ್ನು ಸಹ ನೀಡಲಾಗಿತ್ತು. ಫಜಲ್ ಮತ್ತು ಅವರ ಮೂವರು ಮಕ್ಕಳು ದಿನಗಳ ನಂತರ ನಿಧನರಾಗಿದ್ದರು. ಜಮ್ಮು ಕಾಶ್ಮೀರ

ಜನವರಿ 9 ರಂದು, ನಿವಾಸಿಗಳು ಶೋಕ ಆಚರಿಸುವ ವೇಳೆ ಫಜಲ್ ಅವರ ಮನೆಯಲ್ಲಿ ಮತ್ತೊಂದು ಸಮುದಾಯಿಕ ಭೋಜನವನ್ನು ನೀಡಲಾಗಿತ್ತು.

# ತರಬೇತಿಗಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪರಿಶಿಷ್ಟ ಜಾತಿ ಉಪಯೋಜನೆಯಡಿ ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ ಯುವಜನರಿಗೆ ಜಿಮ್ ಫಿಟ್ನೆಸ್ ಹಾಗೂ ನಿರೂಪಣಾ ಮತ್ತು ವಾರ್ತಾ ವಾಚಕ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದ್ದು, ಸದರಿ ತರಬೇತಿಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಜಿಮ್ ತರಬೇತಿಯನ್ನು ಜನವರಿ 27 ರಿಂದ ಫೆಬ್ರವರಿ 10 ರವರೆಗೆ ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ , ನಿರೂಪಣಾ ಮತ್ತು ವಾರ್ತಾ ವಾಚಕ ತರಬೇತಿ ಶಿಬಿರವನ್ನು ಫೆಬ್ರವರಿ 11 ರಿಂದ 18 ರವರೆಗೆ ಯವನಿಕ ಸಭಾಂಗಣ ಬೆಂಗಳೂರು ಇಲ್ಲಿ ನಡೆಸಲಾಗುವುದು. ತರಬೇತಿಯನ್ನು ಕರ್ನಾಟಕದ ಯುವಕ/ಯುವತಿಯರಿಗೆ ಮಾತ್ರ ನೀಡಲಾಗುವುದು. ವಯೋಮಿತಿ 18 ರಿಂದ 40 ವರ್ಷದೊಳಗಿರಬೇಕು. ಯುವಕ/ಯುವತಿಯರು ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು. ಅರ್ಜಿದಾರರು ಕಡ್ಡಾಯವಾಗಿ ಆರ್.ಡಿ. ಸಂಖ್ಯೆಯಿರುವ ಜಾತಿ ಪ್ರಮಾಣ ಪತ್ರ ಹಾಗೂ ಆದಾಯ ಪ್ರಮಾಣ ಪತ್ರವನ್ನು ಲಗತ್ತಿಸಿರಬೇಕು. ಅರ್ಜಿದಾರರ ಹೆಸರು ಹಾಗೂ ಭಾಗಚಿತ್ರವುಳ್ಳ ಆಧಾರ್ ಪತ್ರವನ್ನು ಲಗತ್ತಿಸುವುದು.

ಕನಿಷ್ಠ ವಿದ್ಯಾರ್ಹತೆ ಪಿಯುಸಿ (ಪಾಸ್/ಫೇಲ್) ಶಿಕ್ಷಣ ಹೊಂದಿರಬೇಕು. ಈ ತರಬೇತಿ ಶಿಬಿರವು 15 ದಿನಗಳ ಕಾಲ ನಡೆಯುತ್ತದೆ. ಅರ್ಜಿದಾರರ ಪ್ರಮಾಣ ಪತ್ರಗಳನ್ನು ಸಂಬಂಧಿಸಿದ ಉಪ/ಸಹಾಯಕ ನಿರ್ದೇಶಕರಿಂದ ದೃಢೀಕರಿಸಿ ಸಲ್ಲಿಸಬೇಕು.

ತರಬೇತಿ ಶಿಬಿರದಲ್ಲಿ ಭಾಗವಹಿಸುವ ಯುವಕ/ಯುವತಿಯರಿಗೆ ಲಘು ಉಪಹಾರ ಒದಗಿಸಲಾಗುವುದು. ಹೊರ ಜಿಲ್ಲೆಗಳಿಂದ ಆಗಮಿಸುವ ಶಿಬಿರಾರ್ಥಿಗಳಿಗೆ ಸಾಮಾನ್ಯ ವಸತಿ ವ್ಯವಸ್ಥೆ ಕಲ್ಪಿಸಲಾಗುವುದು. ಅರ್ಜಿದಾರರು ದೈಹಿಕವಾಗಿ ಸದೃಢರಾಗಿರಬೇಕು.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಗದಗ ದೂರವಾಣಿ ಸಂಖ್ಯೆ 08372-238345 ಸಂಪರ್ಕಿಸಬಹುದಾಗಿದೆ.

# ಕ್ಷೇತ್ರ ಸಮಿತಿ ಚುನಾವಣೆ ಆಯ್ಕೆ




■ವಿಜಯಸಾಕ್ಷಿ ಸುದ್ದಿ, ಗದಗ

ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಗದಗ ವಿಧಾನಸಭಾ ಕ್ಷೇತ್ರ ಸಮಿತಿ ಚುನಾವಣೆಯು (2025-2026 ಅವಧಿಗೆ) ಗದಗ ನಗರದಲ್ಲಿ ಬುಧವಾರ ನಡೆಯಿತು.

ಸಭೆಯನ್ನು ಉದ್ದೇಶಿಸಿ ರಾಜ್ಯಾಧ್ಯಕ್ಷ ಅಡ್ವಕೇಟ್ ತಾಹೇರ್ ಹುಸೇನ್ ಮಾತನಾಡಿದರು. ಚುನಾವಣೆಯಲ್ಲಿ ಜುನೇದ್ ಉಮಚಗಿ ಅಧ್ಯಕ್ಷರಾಗಿ ಸರ್ವಾನುಮತದಿಂದ ಆಯ್ಕೆಯಾದರು. ಮೆಹಬೂಬ್ ರೋಣ-ಪ್ರಧಾನ ಕಾರ್ಯದರ್ಶಿ, ರಶೀದ್-ಉಪಾಧ್ಯಕ್ಷ ಹಾಗೂ ನಫೀಸ್ ಮಕಾಂದಾರ ಅವರನ್ನು ಕಾರ್ಯದರ್ಶಿಯಾಗಿ ನೇಮಕ ಮಾಡಲಾಯಿತು. ಸಭೆಯನ್ನು ಉದ್ದೇಶಿಸಿ ರಾಜ್ಯ ಕಾರ್ಯದರ್ಶಿ ರಿಜ್ವಾನ್ ಹುಮನಾಬಾದ್ ಮಾತನಾಡಿದರು. ಜುನೇದ್ ಉಮಚಗಿ ಸ್ವಾಗತಿಸಿ ವಂದಿಸಿದರು.

# ಶರಣಾಗಿದ್ದ 6 ನಕ್ಸಲರ ಪೊಲೀಸ್ ಕಸ್ಟಡಿ ಇಂದಿಗೆ ಅಂತ್ಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಇತ್ತೀಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದೆ ಶರಣಾಗಿದ್ದ 6 ನಕ್ಸಲರ ಪೊಲೀಸ್ ಕಸ್ಟಡಿ ಇಂದಿಗೆ ಅಂತ್ಯವಾಗಲಿದೆ. ಕಳೆದ ಜನವರಿ 8 ರಂದು 6 ಮಂದಿ ನಕ್ಸಲರಾದ ಶೃಂಗೇರಿ ತಾಲೂಕಿನ ಮುಂಡಗಾರು ಗ್ರಾಮದ ಲತಾ, ಕಳಸ ತಾಲೂಕಿನ ಬಾಳೆಹೊಳೆ ಗ್ರಾಮದ ವನಜಾಕ್ಷಿ, ದಕ್ಷಿಣ ಕನ್ನಡ ಜಿಲ್ಲೆಯ ಕುತ್ಲೂರು ಸುಂದರಿ, ರಾಯಚೂರು ಮೂಲದ ಮಾರಪ್ಪ ಅರೋಲಿ, ಕೆ. ವಸಂತ, ಟಿ.ಎನ್. ಜೀಶಾ ಹಲವು ವರ್ಷಗಳ ಸಶಸ್ತ್ರ ಹೋರಾಟಕ್ಕೆ ವಿದಾಯ ಹೇಳಿ ಮುಖ್ಯಮಂತ್ರಿಗಳ ಸಮ್ಮುಖದಲ್ಲಿ ಶರಣಾಗಿದ್ದರು.

# ನಿಯಮಿತ ನೀರು ಪೂರೈಕೆಗೆ ಅಗತ್ಯ ಕ್ರಮ

▶▶ ಮೊದಲನೇ ಪುಟದಿಂದ

ಜಿಲ್ಲೆಯ ಮುಂಡರಗಿ ತಾಲೂಕಿನ ತುಂಗಭದ್ರಾ ನದಿ ಪಾತ್ರದ ಕೊರ್ಲಹಳ್ಳಿ ಮತ್ತು ಗಂಗಾಪೂರ ಗ್ರಾಮಗಳ ವ್ಯಾಪ್ತಿಯ ನೀರು ಹಸಿರು ಬಣ್ಣಕ್ಕೆ ತಿರುಗಿರುವುದನ್ನು ಗಮನಿಸಿ, ಜಿಲ್ಲಾಡಳಿತ ಈಗಾಗಲೇ ತಾಲೂಕಾಡಳಿತ ಮತ್ತು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ಮಾಡಿದ್ದು, ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳಿಗೆ ಸದರಿ ವಿಷ0ಯದ ಬಗ್ಗೆ ಸೂಕ್ತ ಕ್ರಮವಹಿಸಲು ಸೂಚಿಸಲಾಗಿತ್ತು. ನೀರು ಹಸಿರು ಬಣ್ಣಕ್ಕೆ ತಿರುಗಲು ಕಾರಣವಾಗಿರುವ ಅಂಶಗಳನ್ನು ಪತ್ತೆಹಚ್ಚಲು ನದಿ ನೀರಿನ ಮಾದರಿಯನ್ನು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯವರು ಪರೀಕ್ಷಿಸಿದ್ದು, ಸದರಿ ನೀರು ಕುಡಿಯಲು ಯೋಗ್ಯವಿಲ್ಲವೆಂದು ವರದಿ ನೀಡಿದ್ದಾರೆ.

ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯವರು ವಿಜಯನಗರ ಶುಗರ್ ಪ್ರೈವೇಟ್ ಲಿಮಿಟೆಡ್‌ನವರು ಕಾರ್ಖಾನೆಯ ತ್ಯಾಜ್ಯವನ್ನು ನದಿಗೆ ಬಿಡುಗಡೆ ಮಾಡದಂತೆ ನಿರ್ಬಂಧಿಸಿದ್ದಾರೆ. ಈ ಕುರಿತು ಸ್ಥಳ ಪರಿಶೀಲನೆಗೆ ಜಿಲ್ಲಾಧಿಕಾರಿಗಳ ಹಂತದಲ್ಲಿ ತಂಡ ಭೇಟಿ ನೀಡಲಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಹಾಗೂ ಗ್ರಾಮಸ್ಥರು ಆತಂಕ ಪಡುವ ಅವಶ್ಯತೆ ಇಲ್ಲವೆಂದು ಸಚಿವರು ತಿಳಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸೇರಿದಂತೆ ಇತರ ಅಧಿಕಾರಿಗಳು ಹಾಜರಿದ್ದರು.

**ರೋಟರಿ ಕ್ಲಬ್‌ನಲ್ಲಿ ಮಕ್ಕಳಿಗೆ ಮೌಲ್ಯ ಶಿಕ್ಷಣ ಕುರಿತು ಉಪನ್ಯಾಸ ನೀಡಿದ ಕವಿತಾ**

# ಮಕ್ಕಳು ಭವಿಷ್ಯತ್ತಿನ ರೂವಾರಿಗಳು

■ ವಿಜಯಸಾಕ್ಷಿ ಸುದ್ದಿ, ಗದಗ

ಮಗುವಿನ ಆಸೆ, ಆಕಾಂಕ್ಷೆಗಳಿಗೆ ಕುಟುಂಬದಲ್ಲಿ ಗೌರವ ಹಾಗೂ ಪ್ರೋತ್ಸಾಹವಿರಬೇಕು. ಜೊತೆಗೆ ಉತ್ತಮ ಮಾರ್ಗದರ್ಶನ ಇರಬೇಕೇ ಹೊರತು ತಮ್ಮ ಅಭಿಪ್ರಾಯಗಳನ್ನು ಹೇರಬಾರದು. ಮಕ್ಕಳು ಭವಿಷ್ಯತ್ತಿನ ರೂವಾರಿಗಳು ಎಂದು ಚಿಂತಕಿ ಕವಿತಾ ದಂಡಿನ ಹೇಳಿದರು.

ಅವರು ಗದಗ-ಬೆಟಗೇರಿ ರೋಟರಿ ಕ್ಲಬ್ ನಗರದ ಶ್ರೀಮತಿ ಉಮಾದೇವಿ ಕುಷ್ಟಗಿ ರೋಟರಿ ಕಮ್ಯೂನಿಟಿ ಕೇರ್ ಸೆಂಟರ್ ಸಭಾಂಗಣದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಮೌಲ್ಯ ಶಿಕ್ಷಣದ ಮಹತ್ವದ ಕುರಿತು ಮಾತನಾಡಿದರು.

ಇಂದಿನ ಆಧುನಿಕತೆಯ ಭರಾಟೆಯಲ್ಲಿ ಮಕ್ಕಳು ಉತ್ತಮ ಮೌಲ್ಯಗಳನ್ನು ರೂಢಿಸಿಕೊಳ್ಳುವ ಅವಶ್ಯಕತೆಯು ಅನಿವಾರ್ಯವಾಗಿದೆ. ಮಾನವೀಯತೆ, ಹಿರಿಯರಿಗೆ ಗೌರವ, ನಮ್ಮ ಸಂಸ್ಕೃತಿ, ಹಬ್ಬ ಹರಿದಿನಗಳ ಮಹತ್ವ, ರಾಷ್ಟ್ರಾಭಿಮಾನ, ಐಕ್ಯತೆ ಹಾಗೂ ಸಹಕಾರದಂತಹ ಮಹತ್ವಪೂರ್ಣ ಸಾಮಾಜಿಕ, ಧಾರ್ಮಿಕ ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡು ಬೆಳೆದಿದ್ದೇ ಆದಲ್ಲಿ ಮುಂದೆ ಆ ಮಗು ಒಬ್ಬ ಮಹಾನ್ ವ್ಯಕ್ತಿ ಆಗುವುದರಲ್ಲಿ ಯಾವುದೇ ಸಂದೇಹವಿಲ್ಲ ಎಂದರು.




ಅಧ್ಯಕ್ಷತೆಯನ್ನು ರೋಟರಿ ಕ್ಲಬ್ ಗದಗ-ಬೆಟಗೇರಿ ಅಧ್ಯಕ್ಷ ಡಾ. ರೇವಣಸಿದ್ಧೇಶ್ವರ ಉಪ್ಪಿನ ವಹಿಸಿ ಮಾತನಾಡಿ ಮೌಲ್ಯಗಳು ನಮ್ಮ ಬದುಕಿನ ದಾರಿ ದೀಪಗಳು. ಮುಖ್ಯವಾಗಿ ಮಕ್ಕಳು ಹಾಗೂ ಯುವಕರಲ್ಲಿ ಮೌಲ್ಯಗಳನ್ನು ಗಟ್ಟಿಗೊಳಿಸುವ ಕಾರ್ಯ ನಡೆಯಬೇಕಿದೆ. ಜೊತೆಗೆ ಪ್ರವಾಸಗಳು ನಮಗೆ ಹೊಸ-ಹೊಸ ಅನುಭವ ನೀಡುತ್ತವೆ ಎಂದರು.

ಆತಿಥ್ಯ ವಹಿಸಿದ್ದ ವೀಣಾ ತಿರ್ಲಾಪೂರ ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಕ್ಲಬ್‌ನ ಸದಸ್ಯರುಗಳಾದ ಅಕ್ಷತ್ ಶೆಟ್ಟಿ, ಮಹಾಂತೇಶ ಬಾತಾಖಾನಿ, ಡಾ. ರಾಜಶೇಖರ ಬಳ್ಳಾರಿ ಅವರಿಗೆ ವಿವಾಹ ವಾರ್ಷಿಕೋತ್ಸವದ ಶುಭಾಶಯ ಕೋರಲಾಯಿತು.

ಮುಖ್ಯ ಅತಿಥಿಗಳಾಗಿದ್ದ ಉದ್ಯಮಿ ಚನ್ನವೀರಪ್ಪ ಹುಣಸೀಕಟ್ಟಿ ಮಾತನಾಡಿ, ಮನುಷ್ಯನ ಬದುಕಿನಲ್ಲಿ ಪ್ರವಾಸಗಳು ಉತ್ತಮ ಅನುಭವ ನೀಡುತ್ತವೆ. ಕುಂಭ ಮೇಳವು ಅದ್ಭುತವಾದ ಹಾಗೂ ಬದುಕಿನಲ್ಲಿ ಹೊಸತನ ನೀಡುವುದರೊಂದಿಗೆ ಧಾರ್ಮಿಕವಾಗಿ ಗಟ್ಟಿಗೊಳಿಸುತ್ತದೆ. ತಾವು ಕೈಗೊಂಡ ಪ್ರವಾಸದಲ್ಲಿ ಕಂಡುಕೊಂಡ ಕುಂಭಮೇಳ ಕುರಿತು ತಮ್ಮ ಅನುಭವವನ್ನು ಹಂಚಿಕೊಂಡರು.


ಶ್ರೀಧರ ಸುಲ್ತಾನಪೂರ ಸ್ವಾಗತಿಸಿದರು. ಬಾಲಕೃಷ್ಣ ಕಮತ್, ವಿಶ್ವನಾಥ ಯಳಮಲಿ ಪರಿಚಯಿಸಿದರು. ಕಾರ್ಯದರ್ಶಿ ಸಂತೋಷ ಅಕ್ಕಿ ನಿರೂಪಿಸಿದರು. ಕೊನೆಯಲ್ಲಿ ಶಿವಾಚಾರ್ಯ ಹೊಸಳ್ಳಿಮಠ ವಂದಿಸಿದರು. ಕಾರ್ಯಕ್ರಮದಲ್ಲಿ ಡಾ. ಶೇಖರ ಸಜ್ಜನರ, ರಾಜಶೇಖರ ಬಳ್ಳಾರಿ, ಡಾ. ಕಮಲಾಕ್ಷಿ ಅಂಗಡಿ, ಮಹೇಶ ಬಾತಾಖಾನಿ, ಚಂದ್ರಮೌಳಿ ಜಾಲಿ, ಡಾ. ಆರ್. ಕೆ. ಗಚ್ಚಿನಮಠ, ಡಾ. ಪ್ರಕಾಶ ಕೊಲೊಳಗಿ, ಹೆಚ್.ಎಸ್. ಪಾಟೀಲ, ವಿಶ್ವನಾಥ ಪಾಟೀಲ, ಕಾರ್ತಿಕ ಮುತ್ತಿನಪೆಂಡಿಮಠ, ಸುಮಾ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

# ಮಹಿಳಾ, ಯುವ ಘಟಕದ ಅಧ್ಯಕ್ಷರ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಭಾರತ ವೀರಶೈವ ಮಹಾಸಭಾ ಗದಗ ತಾಲೂಕಾ ಮಹಿಳಾ ಹಾಗೂ ಯುವ ಘಟಕದ ನೂತನ ಅಧ್ಯಕ್ಷರನ್ನು ಇತ್ತೀಚೆಗೆ ಆಯ್ಕೆ ಮಾಡಲಾಯಿತು.





ಮಹಿಳಾ ಘಟಕದ ಅಧ್ಯಕ್ಷರಾಗಿ ಲತಾ ಮುತ್ತಿನಪೆಂಡಿಮಠ ಹಾಗೂ ಯುವ ಘಟಕದ ಅಧ್ಯಕ್ಷರಾಗಿ ಆನಂದ ಗೌಳಿ ಅವರನ್ನು ಆಯ್ಕೆ ಮಾಡಲಾಯಿತು. ತಾಲೂಕು ಸಮಿತಿಯ ಕಾರ್ಯಕಾರಿ ಮಂಡಳಿಯ ಸದಸ್ಯರಾಗಿ ಲಕ್ಷ್ಮೀ ಶಶಿಧರ ಕಟ್ಟಿಮನಿ (ಹಡಪದ ಸಮಾಜ), ಅಕ್ಕಮ್ಮ ರುದ್ರಪ್ಪ ಅಣ್ಣಿಗೇರಿ (ಗಾಣಿಗ ಸಮಾಜ), ಸಾವಿತ್ರಿ ಗಂಗಾಧರ ಹೂಗಾರ (ಹೂಗಾರ ಸಮಾಜ), ಗೀತಾ ಬಾಳು ಭೈರವಾಡಿ (ಗೌಳಿ ಸಮಾಜ), ಸುಲೋಚನಾ ಮಲ್ಲಿಕಾರ್ಜುನ ಐಹೊಳ್ಳಿ (ಶಿವಸಿಂಪಗಿ ಸಮಾಜ) ಇವರುಗಳನ್ನು ಆಯ್ಕೆ ಮಾಡಲಾಯಿತು ಎಂದು ತಾಲೂಕ ಘಟಕದ ಅಧ್ಯಕ್ಷ ಮಹೇಶ ಕೋಟಿ ತಿಳಿಸಿದ್ದಾರೆ.

ಮಹಾಸಭಾದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಶರಣಬಸಪ್ಪ ಗುಡಿಮನಿ, ತಾಲೂಕಾ ಘಟಕದ ಉಪಾಧ್ಯಕ್ಷ ಚನ್ನಬಸಪ್ಪ ಅಕ್ಕಿ ಉಸ್ತುವಾರಿಗಳಾದ ವಿಜಯಕುಮಾರ ಮುತ್ತಿನ ಪೆಂಡಿಮಠ, ಶಿವರಾಜ ಹಿರೇಮನಿಪಾಟೀಲ ಹಾಗೂ ತಾಲೂಕು ಕಮಿಟಿಯ ಎಲ್ಲ ನಿರ್ದೇಶಕರ ಸೂಚನೆಯ ಮೇರೆಗೆ ಅಧ್ಯಕ್ಷ ಮತ್ತು ಕಾರ್ಯಕಾರಿ ಮಂಡಳಿಯ ಸದಸ್ಯರುಗಳನ್ನು ಆಯ್ಕೆ ಮಾಡಲಾಗಿದ್ದು, ಎರಡೂ ಸಮಿತಿಯ ಅಧ್ಯಕ್ಷರುಗಳು ಇತರ ಪದಾಧಿಕಾರಿಗಳನ್ನು ಆಯ್ಕೆ ಮಾಡಿಕೊಳ್ಳಲು ಅಧಿಕಾರ ನೀಡಲಾಗಿದೆ ಎಂದು ತಾಲೂಕು ಘಟಕದ ಅಧ್ಯಕ್ಷ ಮಹೇಶ ಕೋಟಿ ತಿಳಿಸಿದ್ದಾರೆ.

## ಮಥುರಾ ಶಾಹಿ ಮಸೀದಿ ಸಮೀಕ್ಷೆಗೆ ನೀಡಿದ್ದ ತಡೆ ವಿಸ್ತರಿಸಿದ ಸುಪ್ರೀಂಕೋರ್ಟ್

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ಮಥುರಾದ ಶಾಹಿ ಈದ್ಗಾ ಮಸೀದಿ ಸಂಕೀರ್ಣದ ಸಮೀಕ್ಷೆಗೆ ಅನುಮತಿ ನೀಡಿದ ಅಲಹಾಬಾದ್ ಹೈಕೋರ್ಟ್ ಆದೇಶದ ಮೇಲಿನ ತಡೆಯಾಜ್ಞೆಯನ್ನು ಸುಪ್ರೀಂ ಕೋರ್ಟ್ ಬುಧವಾರ ವಿಸ್ತರಿಸಿದೆ. ಶಾಹಿ ಮಸೀದಿಯು ಮಥುರಾದ ದೇವಾಲಯದ ಪಕ್ಕವೆ ಇರುವುದರಿಂದ ಬಿಜೆಪಿ ಬೆಂಬಲಿಗರ ಕುಮ್ಮಕ್ಕಿನಿಂದ ಮಸೀದಿಯು ಈ ಹಿಂದೆ ದೇವಸ್ಥಾನವಿದ್ದ ಜಾಗದಲ್ಲಿ ನಿರ್ಮಿಸಲಾಗಿದೆ ಎಂದು ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಲಾಗಿತ್ತು.

ಮಥುರಾ ಶಾಹಿ ಮಸೀದಿ ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ನಡೆಸಲಾಗುತ್ತಿರುವ ಸಮೀಕ್ಷೆಯ ವಿರುದ್ಧ ಟ್ರಸ್ಟ್ ಶಾಹಿ ಮಸೀದಿ ಈದ್ಗಾದ ನಿರ್ವಹಣಾ ಸಮಿತಿಯ ಅರ್ಜಿಯ ವಿಚಾರಣೆಯನ್ನು ಏಪ್ರಿಲ್ 1ರ ನಂತರರ ವಾರದಲ್ಲಿ ಮುಂದೂಡುವುದಾಗಿ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿಗಳಾದ ಸಂಜಯ್ ಕುಮಾರ್ ಮತ್ತು ಕೆ.ವಿ. ವಿಶ್ವನಾಥನ್ ಅವರನ್ನೊಳಗೊಂಡ ಪೀಠ ಹೇಳಿದೆ. ಮಥುರಾ ಶಾಹಿ ಮಸೀದಿ ಹಾಗಾಗಿ, ಶಾಹಿ ಈದ್ಗಾ ಮಸೀದಿ ಸಂಕೀರ್ಣದಲ್ಲಿ ನ್ಯಾಯಾಲಯದ ಮೇಲ್ವಿಚಾರಣೆಯಲ್ಲಿ ನಡೆದ ಸಮೀಕ್ಷೆಗೆ ತಡೆ ನೀಡಿದ ಅಲಹಾಬಾದ್ ಹೈಕೋರ್ಟ್‌ನ ಮಧ್ಯಂತರ ಆದೇಶವು ಮುಂದುವರಿಯಲಿದೆ ಎಂದು ಪೀಠ ಹೇಳಿದೆ. ಕಳೆದ ವರ್ಷ ಜನವರಿ 16 ರಂದು ಡಿಸೆಂಬರ್ 14, 2023 ರಂದು ಹೈಕೋರ್ಟ್ ನೀಡಿದ್ದ ಆದೇಶದ ಕಾರ್ಯಾಚರಣೆಗೆ ಸುಪ್ರೀಂ ಕೋರ್ಟ್ ತಡೆ ನೀಡಿತ್ತು.

# ಕಲ್ಲಿನಲ್ಲಿ ಅರಳಿದ ಶಿಲ್ಪಕಲೆಯ ಅನಾವರಣ

▶▶ ಮೊದಲನೇ ಪುಟದಿಂದ

ದೆಹಲಿಯ ಗಣರಾಜ್ಯೋತ್ಸವದ ಸ್ತಬ್ಧಚಿತ್ರದ ವಿಷಯದ ಆಯ್ಕೆ, ವಿನ್ಯಾಸ, ಕೇಂದ್ರ ಸರ್ಕಾರ ರಕ್ಷಣಾ ಇಲಾಖೆಯಲ್ಲಿ ಅದರ ಅನುಮೋದನೆ, ನಿರ್ಮಾಣ, ಪಾಲ್ಗೊಳ್ಳುವಿಕೆ ಹೀಗೆ ಎಲ್ಲಾ ಹಂತಗಳಲ್ಲೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯೇ ಸಕ್ರಿಯವಾಗಿ ಪಾಲ್ಗೊಳ್ಳುತ್ತದೆ. ಅಲ್ಲದೆ, ಇಲಾಖೆಯು ಕಳೆದ 15 ವರ್ಷಗಳಿಂದ ನಿರಂತರವಾಗಿ ಗಣರಾಜ್ಯೋತ್ಸವದ ಪಥಸಂಚಲನ ಮತ್ತು ಪ್ರದರ್ಶನದಲ್ಲಿ ಪಾಲ್ಗೊಳ್ಳುತ್ತಿದೆ. ಇದು ಕನ್ನಡಿಗರೆಲ್ಲರೂ ಹೆಮ್ಮೆ ಪಡುವ ಸಂಗತಿ ಎಂದು ಅವರು ತಮ್ಮ ಸಂತಸವನ್ನು ಹಂಚಿಕೊಂಡರು.



ಸ್ತಬ್ಧಚಿತ್ರದ ಮುಂಭಾಗವು ಬ್ರಹ್ಮ ಜಿನಾಲಯ ದೇವಸ್ಥಾನದ ಬ್ರಹ್ಮನ ಪ್ರತಿಮೆಯನ್ನು ಹೊಂದಿದೆ. ಇದು ಲಕ್ಕುಂಡಿಯಲ್ಲಿರುವ ಅತ್ಯಂತ ಹಳೆಯ ಜೈನ ದೇವಾಲಯವಾಗಿದ್ದು, ಭಗವಾನ್ ಮಹಾವೀರನಿಗೆ ಸಮರ್ಪಿತವಾಗಿದೆ. ಅದರ ನಂತರ ಬ್ರಹ್ಮ ಜಿನಾಲಯ ದೇವಸ್ಥಾನದ ತೆರೆದ ಕಂಬದ ಮಂಟಪವಿದೆ. ಸ್ತಬ್ಧಚಿತ್ರದ ಮುಖ್ಯ ವಿಭಾಗವು ಭವ್ಯವಾದ ಮತ್ತು ಅಲಂಕೃತವಾದ ಕಾಶಿ ವಿಶ್ವೇಶ್ವರ ದೇವಸ್ಥಾನ ಮತ್ತು ಶಿವನಿಗೆ ಸಮರ್ಪಿತವಾದ ನನ್ನೇಶ್ವರ ದೇವಸ್ಥಾನವನ್ನು ಪ್ರದರ್ಶಿಸುತ್ತದೆ.

ಗದಗದ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಡಾ. ಶರಣು ಗೋಗೇರಿ ಅವರು ಒದಗಿಸಿದ ಛಾಯಾಚಿತ್ರಗಳು ಮತ್ತು ಮಾಹಿತಿ ಸೇರಿದಂತೆ ವಿಷಯ ಪರಿಣಿತರು, ತಜ್ಞರು, ಕಲಾನಿರ್ದೇಶಕರು ಮತ್ತು ಕಲಾವಿದರೊಂದಿಗೆ ಪರಾಮರ್ಶಿಸಿಕೊಂಡು ಇಲಾಖೆಯು ಈ ಕೆಲಸವನ್ನು ಕೈಗೆತ್ತಿಕೊಂಡಿತ್ತು. ಹಾಕಿಕೊಂಡ ಕಾರ್ಯತಂತ್ರದ ರೂಪುರೇಷೆಗಳಂತೆ ಈ ಸ್ತಬ್ಧಚಿತ್ರ ದಿನಗಳ ಲೆಕ್ಕದಲ್ಲಿ ಮೈದಳೆದಿದೆ. ಕಡಿಮೆ ಅವಧಿಯಲ್ಲಿ ಅತ್ಯಂತ ಅಚ್ಚುಕಟ್ಟಾಗಿ ಸ್ತಬ್ಧಚಿತ್ರ ಕಣ್ಣಿಗೆ ಕಟ್ಟುವ ರೀತಿಯಲ್ಲಿ ಮೂಡಿ ಬಂದಿದೆ ಎಂದರು.

ಅಂತಾರಾಷ್ಟ್ರೀಯ ಖ್ಯಾತಿಯ ಕಲಾನಿರ್ದೇಶಕ ಶಶಿಧರ ಅಡಪ ವಿನ್ಯಾಸ ಮಾಡಿಕೊಟ್ಟ ಮಾದರಿಗೆ ಆಯ್ಕೆ ಸಮಿತಿ ಮೊದಲ ಹಂತದಲ್ಲೇ ಅನುಮೋದನೆ ನೀಡಿತ್ತು. ಸಂಗೀತ ನಿರ್ದೇಶಕ ಪ್ರವೀಣ್ ಡಿ.ರಾವ್ ಅವರ ಕನ್ನಡ ಸಂಗೀತವನ್ನು ಹಾಗೆಯೇ ಉಳಿಸಿಕೊಂಡಿದೆ. ಮೈಸೂರು, ಬೆಂಗಳೂರು, ಗದಗ ಮತ್ತು ಧಾರವಾಡದ ಕಲಾವಿದರಿಂದ ಕೂಡಿರುವ 18 ಮಂದಿ ತಂಡವನ್ನು ಜಗ್ಗಲಿಗೆ ಕಲಾವಿದರಾದ ಲಿಂಗಯ್ಯ ಅವರು ಮುನ್ನಡೆಸುತ್ತಾರೆ ಎಂದು ವಿವರಿಸಿದರು.

# ಕಡಲೆ ಖರೀದಿ ಕೇಂದ್ರ ತೆರೆಯಲು ಆಗ್ರಹ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾದ್ಯಂತ ಈ ವರ್ಷ ಹಿಂಗಾರು ಮಳೆ ವಾಡಿಕೆಗಿಂತ ಅಧಿಕ ಪ್ರಮಾಣದಲ್ಲಿ ಆಗಿರುವುದರಿಂದ ರೈತರು ಕಡಲೆಯನ್ನು ಅಧಿಕ ಪ್ರಮಾಣದಲ್ಲಿ ಬಿತ್ತನೆ ಮಾಡಿದ್ದಾರೆ. ಆದರೆ, ತರುವಾಯ ಮೋಡ ಕವಿದ ವಾತಾವರಣ ಹಾಗೂ ಸಿಡಿ ರೋಗಬಾಧೆ ಆವರಿಸಿ ಕಡಲೆ ಬೆಳೆ ಸಂಪೂರ್ಣ ನಾಶವಾಗಿದೆ.



ಈಗ ಅಳಿದುಳಿದ ಬೆಳೆ ಕಟಾವಿಗೆ ಬಂದಿದೆ. ಅದನ್ನು ರಾಶಿ ಮಾಡಿಕೊಂಡು ಮಾರುಕಟ್ಟೆಗೆ ತೆಗೆದುಕೊಂಡು ಹೋದರೆ ಸರಿಯಾದ ಬೆಲೆ ಸಿಗುತ್ತಿಲ್ಲ. ರೈತರಿಗೆ ಬಿತ್ತನೆಯಿಂದ ಹಿಡಿದು ರಾಶಿ ಮಾಡುವವರೆಗೆ 4 ಎಕರೆ ಜಮೀನಿನಲ್ಲಿ ಬೆಳೆ ತೆಗೆಯಬೇಕಾದರೆ ಸುಮಾರು 15ರಿಂದ 20 ಸಾವಿರ ರೂಪಾಯಿಗಳು ಖರ್ಚಾಗುತ್ತದೆ. ಆದರೆ, ಖರ್ಚು ಮಾಡಿದಷ್ಟು ಬೆಳೆ ಬರುತ್ತಿಲ್ಲ.

ಹೀಗಾಗಿ ರೈತರು ಸಂಕಷ್ಟದಲ್ಲಿದ್ದಾರೆ. ಬೆಳೆದ ಕಡಲೆಯನ್ನು ರೈತರು ಮಾರುಕಟ್ಟೆಗೆ ತೆಗೆದುಕೊಂಡು ಹೋದರೆ ಪ್ರತಿ ಕ್ವಿಂಟಲ್‌ಗೆ ಕನಿಷ್ಠ 2 ಸಾವಿರದಿಂದ ಗರಿಷ್ಠ 6183 ರೂಪಾಯಿಗೆ ಮಾರಾಟ ಮಾಡುತ್ತಿದ್ದಾರೆ. ಸರ್ಕಾರ ಮಧ್ಯ ಪ್ರವೇಶಿಸಿ ಕನಿಷ್ಠ 10500 ರೂಪಾಯಿಗೆ ಕಡಲೆಗೆ ಬೆಂಬಲ ಬೆಲೆ ಘೋಷಣೆ ಮಾಡಿ ಖರೀದಿಸಲು ಮುಂದಾಗಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ವಿ.ಆರ್. ನಾರಾಯಣರೆಡ್ಡಿ ಬಣದ ಗದಗ ಜಿಲ್ಲಾ ರೈತ ಸಂಘದ ಅಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ, ರೈತ ಸಂಘದ ಗ್ರಾಮ ಘಟಕದ ಅಧ್ಯಕ್ಷ ಹುಚ್ಚೀರಪ್ಪ ಜೋಗಿನ, ಗಿರೀಶ್ ಗುಡ್ಲಾನೂರ, ಶರಣಪ್ಪ ಜೋಗಿನ, ಬಾಳಪ್ಪ ಗಂಗರಾತ್ರಿ, ರಾಮಣ್ಣ ಖಂಡ್ರಿ, ರಾಮಣ್ಣ ಡಂಬಳ ಮುಂತಾದ ರೈತ ಮುಖಂಡರು ಆಗ್ರಹಿಸಿದ್ದಾರೆ.

# ರಸ್ತೆ ಸುರಕ್ಷತಾ ಜಾಗೃತಿ ಅಭಿಯಾನ




■ ವಿಜಯಸಾಕ್ಷಿ ಸುದ್ದಿ, ಗದಗ

ನೆಹರು ಯುವ ಕೇಂದ್ರ ಗದಗ, ಗದಗ ಜಿಲ್ಲಾ ಪೊಲೀಸ್, ಗದಗ ಸಂಚಾರ ಪೊಲೀಸ್ ಠಾಣೆ, ಶ್ರೀ ಡಿಜಿಎಮ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಗದಗ, ರಾಷ್ಟ್ರೀಯ ಸ್ವಯಂ ಸೇವಾ ಘಟಕ ಇವರ ಸಯುಂಕ್ತ ಆಶ್ರಯದಲ್ಲಿ 'ರಸ್ತೆ ಸುರಕ್ಷತಾ ಜಾಗೃತಿ ಅಭಿಯಾನ-2025' ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಡಿಜಿಎಮ್ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎಸ್.ಎನ್. ಬೆಳವಡಿ ಉದ್ಘಾಟಿಸಿ, ನಗರದ ಮುಳಗುಂದ ನಾಕಾದವರೆಗೆ ಬಂದು ಶಿಬಿರಾರ್ಥಿಗಳಿಗೆ ಪ್ರಾಯೋಗಿಕವಾಗಿ ರಸ್ತೆ ಸುರಕ್ಷತೆಯ ಕುರಿತು ಸಂಚಾರ ನಿಯಮಗಳನ್ನು ಪಾಲಿಸುವಂತೆ ತಿಳಿಸಿದರಲ್ಲದೆ, ಸ್ವತಃ ಶಿಬಿರಾರ್ಥಿಗಳಿಂದ ಸಂಚಾರ ಪೊಲೀಸ್‌ರೊಂದಿಗೆ ಸ್ವಯಂ ಸೇವಕರಾಗಿ ಸಾರ್ವಜನಿಕರಿಗೆ ಸಂಚಾರ ನಿಯಮಗಳ ಪಾಲನೆ ಮಾಡುವಲ್ಲಿ ಸಹಕರಿಸಿದರು.

ನಂತರ ನಗರದ ಭೂಮರಡ್ಡಿ ವೃತ್ತದಲ್ಲಿ ರಾಷ್ಟ್ರೀಯ ರಸ್ತೆ ಸುರಕ್ಷತಾ ಜಾಗೃತಿ ಅಂಗವಾಗಿ ಸಂಚಾರ ನಿಯಮಗಳನ್ನು ಪಾಲಿಸಿದವರಿಗೆ ಹೂಗುಚ್ಛ ನೀಡಿ ಸತ್ಕರಿಸಿ, ಸಂಚಾರ ನಿಯಮಗಳನ್ನು ಪಾಲಿಸುವಂತೆ ಭಿತ್ತಿ ಪತ್ರಗಳನ್ನು ವಿತರಿಸಿ ಜಾಗೃತಿ ಮೂಡಿಸಲಾಯಿತು. ಶಿಬಿರದ ಸಮಾರೋಪ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಗದಗ ಉಪವಿಭಾಗದ ಡಿ.ಎಸ್.ಪಿ ಜೆ.ಎಚ್. ಇನಾಮದಾರ್ ಆಗಮಿಸಿ ಸಂಚಾರ ನಿಯಮದ ಬಗ್ಗೆ ಮಾತನಾಡಿ ಶಿಬಿರಾರ್ಥಿಗಳಿಗೆ ಪ್ರಮಾಣಪತ್ರವನ್ನು ವಿತರಿಸಿದರು.

ಕಾರ್ಯಕ್ರಮದಲ್ಲಿ ಡಿಜಿಎಮ್ ಆಯುರ್ವೇದ ಮಹಾವಿದ್ಯಾಲಯದ ಸುಮಾರು 50 ವಿದ್ಯಾರ್ಥಿಗಳು ಮತ್ತು ಪ್ರಾಧ್ಯಾಪಕರು, ಗದಗ ಗ್ರಾಮೀಣ ಠಾಣೆಯ ಪಿಐ ಸಿದ್ದಾರಮೇಶ್ವರ ಗುಡೇದ, ಬೆಟಗೇರಿ ಠಾಣೆಯ ಪಿ.ಎಸ್.ಐ ಎಲ್.ಎಮ್. ಆರಿ, ಸಂಚಾರ ಪೊಲೀಸ್ ಠಾಣೆಯ ಎ.ಎಸ್.ಐ ಎಸ್.ಎಮ್. ತೆಗ್ಗಿ, ಸಂಚಾರ ಠಾಣೆಯ ಸಿಬ್ಬಂದಿಗಳಾದ ಎನ್.ಎಚ್. ಗುಡ್ಡದ, ಬಿ.ಐ. ಕಮ್ಮಾರ, ಸಂತೋಷ ಹರಿಜನ, ಸಂಗೀತಾ ಕಿಂದ್ರಿ ಭಾಗವಹಿಸಿದ್ದರು. ಕೊನೆಗೆ ನೆಹರು ಯುವ ಕೇಂದ್ರದ ಅಧಿಕಾರಿಗಳಾದ ಎನ್.ರಂಜನಿ ವಂದಿಸಿದರು.

## ವಕೀಲರ ಮುಷ್ಕರ | ರಾಹುಲ್ ಗಾಂಧಿ ವಿರುದ್ಧದ ಮಾನನಷ್ಟ ಮೊಕದ್ದಮೆ ವಿಚಾರಣೆ ಮತ್ತೆ ಮುಂದೂಡಿಕೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು.

ಕಾಂಗ್ರೆಸ್ ಸಂಸದ ರಾಹುಲ್ ಗಾಂಧಿ ವಿರುದ್ಧದ ಮಾನನಷ್ಟ ಮೊಕದ್ದಮೆಯ ವಿಚಾರಣೆಯನ್ನು ವಕೀಲರ ನಿರಂತರ ಮುಷ್ಕರದ ಕಾರಣಕ್ಕಾಗಿ ಮತ್ತೆ ಮುಂದೂಡಲಾಗಿದೆ ಎಂದು ವರದಿಯಾಗಿದೆ. ಕರ್ನಾಟಕ ಚುನಾವಣೆಯ ಸಮಯದಲ್ಲಿ ಗೃಹ ಸಚಿವ ಅಮಿತ್ ಶಾ ಬಗ್ಗೆ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಿ ರಾಹುಲ್ ಗಾಂಧಿ ವಿರುದ್ಧ ಪ್ರಕರಣ ದಾಖಲಿಸಲಾಗಿತ್ತು. ವಕೀಲರ ಮುಷ್ಕರ ಪ್ರಕರಣದ ಕ್ರಾಸ್ ಎಕ್ಸಾಮಿನೇಷನ್ ಪೂರ್ಣಗೊಳಿಸಲು ವಿಶೇಷ ಸಂಸದ ಶಾಸಕ ನ್ಯಾಯಾಲಯದ ನ್ಯಾಯಾಧೀಶ ಶುಭಂ ವರ್ಮಾ ಅವರು ಜನವರಿ 30 ರಂದು ಮುಂದಿನ ವಿಚಾರಣೆಯನ್ನು ನಿಗದಿಪಡಿಸಿದ್ದಾರೆ ಎಂದು ವಾದಿ ವಿಜಯ್ ಮಿಶ್ರಾ ಅವರ ವಕೀಲ ಸಂತೋಷ್ ಕುಮಾರ್ ಪಾಂಡೆ ಹೇಳಿದ್ದಾರೆ.

## ನಿಧನ



**ಮಾಬುಸಾಬ ನದಾಫ್**

ಲಕ್ಕುಂಡಿ: ಇಲ್ಲಿಯ ಹಿರೇಮಸೂತಿ ಬಳಿಯ ನಿವಾಸಿ ಮಾಬುಸಾಬ ಹೊನ್ನೂರಸಾಬ ಹಂದ್ರಾಳ (ನದಾಫ್) (80) ಸೋಮವಾರ ನಿಧನರಾದರು. ಮೃತರಿಗೆ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗ ಇದ್ದಾರೆ.

# ಅಕ್ಷರ ಜ್ಞಾನಕ್ಕೆ ಮಹತ್ವ ನೀಡಿ



■ ವಿಜಯಸಾಕ್ಷಿ ಸುದ್ದಿ, ರೋಣ

ಗ್ರಾಮೀಣ ಭಾಗಗಳಲ್ಲಿ ಪಾಲಕರು ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಬೇಕು ಎಂದು ಪುರಸಭೆಯ ಸದಸ್ಯ ಸಂಗನಗೌಡ ಪಾಟೀಲ ಹೇಳಿದರು.

ಅವರು ಚಿಕ್ಕಮಣ್ಣೂರ ಗ್ರಾಮದಲ್ಲಿ ಜರುಗಿದ ಅಂಗನವಾಡಿ ಕಟ್ಟಡ ಭೂಮಿಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಮಕ್ಕಳಿಗೆ ಗುಣಮಟ್ಟದ ಅಕ್ಷರ ಜ್ಞಾನ ಸಿಕ್ಕಾಗ ಮಾತ್ರ ಕುಟುಂಬಗಳು ಬಲವರ್ಧನೆ ಹೊಂದಲು ಸಾಧ್ಯ. ಮುಖ್ಯವಾಗಿ ಗ್ರಾಮ ಅಭಿವೃದ್ಧಿ ಪಥದಲ್ಲಿ ಸಾಗಲು ಅಕ್ಷರ ಜ್ಞಾನ ಮಹತ್ವ ಪಡೆಯುತ್ತದೆ. ಹೀಗಾಗಿ ಪಾಲಕರು ತಮ್ಮ ಮಕ್ಕಳಿಗೆ ಶಿಕ್ಷಣ ಒದಗಿಸಲು ಮುಂದಾಗಬೇಕು ಎಂದು ಕರೆ ನೀಡಿದರು.

ಸಿಡಿಪಿಓ ಪಂಚಾಕ್ಷರಯ್ಯ ಹಿರೇಮಠ ಭೂಮಿ ಪೂಜೆಯನ್ನು ನೆರವೇರಿಸಿದರು. ಇದೇ ಸಂದರ್ಭದಲ್ಲಿ ಗ್ರಾಮದ ಸ.ಹಿ.ಪ್ರಾ ಶಾಲೆಯ ಶಿಕ್ಷಕರು ಹಾಗೂ ಶಾಲಾ ಸಮಿತಿ ಪದಾಧಿಕಾರಿಗಳು, ಶಾಲಾ ಶತಮಾನೋತ್ಸವ ಕಾರ್ಯಕ್ರಮಕ್ಕೆ ಶಾಸಕರಿಂದ ಅಗತ್ಯ ನೆರವು ಒದಗಿಸಬೇಕು ಎಂದು ಮನವಿ ಸಲ್ಲಿಸಿದರು. ಶಿವಪ್ಪ ಪಟ್ಟೇದ, ಹನ್ಮಂತಪ್ಪ ರಾಜಣ್ಣವರ, ಗೌಸಿದ್ದಪ್ಪ ಮಾದರ, ಪುಂಡಲೀಕ ವಾಲ್ಮೀಕಿ, ಶರಣಪ್ಪ ಕೊಟಗಿ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

# ರಕ್ತದಾನ ಶಿಬಿರ ಇಂದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶದ ಸ್ವಾತಂತ್ರ್ಯ ಹೋರಾಟಗಾರ ನೇತಾಜಿ ಸುಭಾಷಚಂದ್ರ ಭೋಸ್ ಅವರ ಜಯಂತ್ಯುತ್ಸವದ ಪ್ರಯುಕ್ತ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರ (ಸರಕಾರಿ ಆಸ್ಪತ್ರೆ)ದಲ್ಲಿ ಜ.23ರಂದು ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ಏರ್ಪಡಿಸಲಾಗಿದೆ.

ರಕ್ತದಾನ ಮಾಡುವವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ತಾಲೂಕಾ ಆರೋಗ್ಯ ವೈದ್ಯಾಧಿಕಾರಿಗಳು ಮತ್ತು ಆಡಳಿತ ವೈದ್ಯಾಧಿಕಾರಿಗಳು ವಿನಂತಿಸಿದ್ದಾರೆ. ರಕ್ತ ದಾನ ಮಾಡುವ ದಾನಿಗಳು 9916071705/9916763074 ಸಂಪರ್ಕಿಸಲು ಕೋರಲಾಗಿದೆ.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕೇಂದ್ರ ಸರ್ಕಾರದ ಮಿಷನ್ ಶಕ್ತಿ ಯೋಜನೆಯಡಿ ಜಿಲ್ಲಾ ಮಹಿಳಾ ಸಬಲೀಕರಣ ಘಟಕದಲ್ಲಿ ಗದಗ ಜಿಲ್ಲೆಗೆ ಮಂಜೂರಾಗಿರುವ 1 ಹುದ್ದೆಯನ್ನು ಷರತ್ತಿಗೊಳಪಟ್ಟು ಸೃಜಿಸಿ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ತಿಳಿಸಿರುವುದರಿಂದ ಪಿಎಂಎಂವಿವೈ ಜಿಲ್ಲಾ ಸಂಯೋಜಕರು ಈ ಹುದ್ದೆಗೆ ನಿಗದಿಪಡಿಸಿದ ನಿಬಂಧನೆಗೊಳಪಟ್ಟು ಅಭ್ಯರ್ಥಿಯನ್ನು ಗೌರವಧನದ ಆಧಾರದಲ್ಲಿ ಮಿಷನ್ ಶಕ್ತಿ ಯೋಜನೆ ಮಾರ್ಗಸೂಚಿಯಂತೆ ತಾತ್ಕಾಲಿಕವಾಗಿ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಬೇಕಾಗಿರುತ್ತದೆ. ಸದರಿ ಹುದ್ದೆಯ ಭರ್ತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಅಹ್ವಾನಿಸಿದ್ದು, ಇದಕ್ಕೆ ಸಂಬಂಧಿಸಿದಂತೆ ಜಿಲ್ಲಾ ಉಪನಿರ್ದೇಶಕರ ಕಚೇರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರೂಮ್ ನಂ:06 ಜಿಲ್ಲಾಡಳಿತ ಭವನ ಗದಗ ಇವರನ್ನು ಸಂಪರ್ಕಿಸುವುದು. ಭರ್ತಿ ಮಾಡಿದ ಅರ್ಜಿಗಳನ್ನು ಜನವರಿ 30 ರಂದು ಸಮಯ 5:30 ರೊಳಗಾಗಿ ಖುದ್ದಾಗಿ ಸಲ್ಲಿಸಬೇಕು.

ಹೆಚ್ಚಿನ ವಿವರಗಳಿಗಾಗಿ ಹಾಗೂ ನಿಬಂಧನೆಗಳಿಗಾಗಿ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ ದೂರವಾಣಿ: 08372-220711 ಈ ವಿಳಾಸಕ್ಕೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

### ವಿಶೇಷ ತರಬೇತಿ ಕಾರ್ಯಕ್ರಮದಲ್ಲಿ ಹಾಲು ಉತ್ಪಾದಕರ ಮಹಾಮಂಡಳದ ನಿರ್ದೇಶಕ ಎಚ್.ಜಿ. ಹಿರೇಗೌಡ್ರ ಅಭಿಮತ

# ಆರ್ಥಿಕ ಬಲವರ್ಧನೆಗಾಗಿ ಸುಧಾರಿತ ಸೇವೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ಗದಗ ಹಾಗೂ ಸಹಕಾರ ಇಲಾಖೆ ಇವರುಗಳ ಸಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯ ಇತರೆ ಸಹಕಾರ ಸಂಘಗಳ ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ಒಂದು ದಿನದ ಜಿಲ್ಲಾ ವಿಶೇಷ ತರಬೇತಿ ಕಾರ್ಯಕ್ರಮವು ಬುಧವಾರ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಜರುಗಿತು.




ಕರ್ನಾಟಕ ರಾಜ್ಯ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳದ ನಿರ್ದೇಶಕ ಎಚ್.ಜಿ. ಹಿರೇಗೌಡ್ರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಖಾಸಗೀಕರಣ, ಜಾಗತೀಕರಣ ಮತ್ತು ಆರ್ಥಿಕ ಉದಾರೀಕರಣಗಳ ನಡುವೆ ಬಲವಾಗಿ ಬೇರು ಬಿಟ್ಟಿರುವ ಸಹಕಾರ ಕ್ಷೇತ್ರವು ಸದಸ್ಯರ ಆರ್ಥಿಕ ಬಲವರ್ಧನೆಗಾಗಿ ಸುಧಾರಿತ ತಂತ್ರಾಧಾರಿತ ಸೇವೆಗಳನ್ನು ನೀಡುತ್ತಾ ಬಂದಿದೆ ಎಂದರು.

ಸಹಕಾರ ಕ್ಷೇತ್ರ ಪ್ರಾರಂಭವಾದಾಗಿನಿಂದ ರೈತರಿಗೆ, ಕಾರ್ಮಿಕರಿಗೆ, ಆರ್ಥಿಕವಾಗಿ ಅಬಲರಾದ ಜನರಿಗೆ ನೆರವಾಗಲು ತಾನೇ ರಚಿಸಿಕೊಂಡು ತಾನೇ ಮುನ್ನಡೆಸುವ ಉದ್ದೇಶದಿಂದ ಪ್ರಾರಂಭಗೊಂಡಿದೆ. ಇಂದು ಸಹಕಾರ ಕ್ಷೇತ್ರ ಪ್ರವೇಶಿಸದ ಯಾವುದೇ ವಲಯವಿಲ್ಲ. ಅಪ್ಪರಮಟ್ಟಿಗೆ ಸಹಕಾರ ಕ್ಷೇತ್ರ ವಿಸ್ತಾರವಾಗಿ ಬೆಳೆದು ನಿಂತಿದೆ. ಸಹಕಾರ ಕ್ಷೇತ್ರವು ಎಲ್ಲಾ ವರ್ಗದ ಎಲ್ಲಾ ಜನರ ಆಶೋತ್ತರಗಳನ್ನು ಪೂರೈಸುವ ದಿಸೆಯಲ್ಲಿ ಕಾರ್ಯನಿರ್ವಹಿಸುತ್ತಾ ಒಂದು ಆರ್ಥಿಕ ಶಕ್ತಿಯಾಗಿ ರೂಪಿತವಾಗಿದೆ ಎಂದರು.

ಗದಗ ಜಿಲ್ಲೆಯ ಸಹಕಾರ ಸಂಘಗಳ ಉನಿಬಂಧಕರಾದ ಎಸ್.ಎಸ್. ಕಬಾಡೆ ಮಾತನಾಡಿ, ಜನರಲ್ಲಿ ಉಳಿತಾಯ ಮನೋಭಾವನೆ ಬೆಳೆಸಲು ಹಾಗೂ ಆರ್ಥಿಕವಾಗಿ ಸ್ವಾವಲಂಭಿಗಳನ್ನಾಗಿಸಲು ಮಹಿಳೆಯರು, ಬಡವರು, ಸೇರಿದಂತೆ ಸಮಾಜದ ಕಡೆಯ ವ್ಯಕ್ತಿಗೂ ತಲುಪಲು ಸಹಕಾರ ಕ್ಷೇತ್ರವು ಸೂಕ್ತ ಮಾರ್ಗವಾಗಿದೆ ಎಂದರು.

ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಸದಸ್ಯರುಗಳಿಗೆ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪ ಯೋಜನೆಯಡಿ ಸಹಾಯಧನ ನೀಡುವ ಮೂಲಕ ಅವರ ವಾರ್ಷಿಕ ಸದಸ್ಯತ್ವದ ವಂತಿಗೆಯನ್ನು ಸರ್ಕಾರವೇ ಭರಿಸುತ್ತದೆ. ಎಪಿಎಲ್ ಮತ್ತು ಬಿಪಿಎಲ್ ಎಂಬ ಯಾವುದೇ ವ್ಯತ್ಯಾಸವಿಲ್ಲದೆ ಈ ಯೋಜನೆ ಎಲ್ಲರಿಗೂ ಅನ್ವಯಿಸುತ್ತದೆ. ಯಾವುದೇ ವಯೋಮಿತಿ ನಿರ್ಭಂಧ ಇರುವುದಿಲ್ಲ. ಯಶಸ್ವಿನಿ ಯೋಜನೆ ಸದಸ್ಯರು ಸರ್ಕಾರಿ ಆಸ್ಪತ್ರೆಗಳು ಸೇರಿದಂತೆ ಯೋಜನೆಯಡಿ ಗುರುತಿಸಲ್ಪಟ್ಟಿರುವ ನೆಟ್‌ವರ್ಕ್ ಆಸ್ಪತ್ರೆಗಳಲ್ಲಿ ವೈದ್ಯಕೀಯ ಚಿಕಿತ್ಸೆ, ಶಸ್ತ್ರಚಿಕಿತ್ಸೆಗೆ ಸೌಲಭ್ಯ ಪಡೆಯಲು ಅವಕಾಶ ಈ ಮೇಲಿನ ಎಲ್ಲ ವಿಷಯಗಳು ಯಶಸ್ವಿನಿ ಯೋಜನೆಯ ವೈಶಿಷ್ಟ್ಯತೆಗಳಾಗಿವೆ ಎಂದರು.

ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಅಧ್ಯಕ್ಷ ಸಿ.ಎಂ. ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡುತ್ತಾ, ಸಹಕಾರ ಸಂಘಗಳಲ್ಲಿ ಲೆಕ್ಕ ಪತ್ರಗಳ ನಿರ್ವಹಣೆ ಹಾಗೂ ಲೆಕ್ಕಪರಿಶೋಧನೆ, ಸಹಕಾರ ಸಂಘಗಳಲ್ಲಿ ಆಡಳಿತಾತ್ಮಕ ನಿರ್ವಹಣೆ, ಯಶಸ್ವಿನಿ ಯೋಜನೆ ಆಗಮಿಸಿದ ಸಂಪನ್ಮೂಲ ವ್ಯಕ್ತಿಗಳಿಂದ ಇಂದಿನ ಕಾರ್ಯಕ್ರಮದಲ್ಲಿ ತಿಳಿದುಕೊಂಡು ಸಂಘದಲ್ಲಿ ಅಳವಡಿಸಿಕೊಂಡು ಸಂಘದ ಏಳಿಗಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ 'ಸಹಕಾರ ಸಂಘಗಳಲ್ಲಿ ಲೆಕ್ಕ ಪತ್ರಗಳ ನಿರ್ವಹಣೆ ಹಾಗೂ ಲೆಕ್ಕಪರಿಶೋಧನೆ' ಕುರಿತು ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ಇಲಾಖೆಯ ಉಪನಿರ್ದೇಶಕ ಅರವಿಂದ ಎನ್. ನಾಗಜ್ಜನವರ, 'ಸಹಕಾರ ಸಂಘಗಳಲ್ಲಿ ಆಡಳಿತಾತ್ಮಕ ನಿರ್ವಹಣೆ' ಕುರಿತು ರೋಣ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಪ್ರಶಾಂತ ಮುಧೋಳ ಹಾಗೂ 'ಯಶಸ್ವಿನಿ ಯೋಜನೆ' ಕುರಿತು ಗದಗ ಯಶಸ್ವಿನಿ ಕೋ-ಆರ್ಡಿನೇಟರ್ ಪ್ರಮೋದ ಕುಶಬಿ ಉಪನ್ಯಾಸ ನೀಡಿದರು.

ರಾಣಿ ಚನ್ನಮ್ಮ ಮಾನಿನಿ ಸಹಕಾರ ಸಂಘದ ನಿರ್ದೇಶಕರಾದ ಸಾವಿತ್ರಿ ಮೊರಬದ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಎಸ್.ಕರಿಯಪ್ಪನವರ ನಿರೂಪಿಸಿದರೆ, ಮಹಿಳಾ ಸಹಕಾರ ಶಿಕ್ಷಕಿ ರಶೀದಾಬಾನು ಸಿ.ಯಲಿಗಾರ ವಂದಿಸಿದರು.

### ಗದಗ ಸ್ತ್ರೀರೋಗ, ಪ್ರಸೂತಿ ತಜ್ಞರ ಸಂಘದಿಂದ ನಿರಂತರ ವೈದ್ಯಕೀಯ ಶಿಕ್ಷಣ ಕಾರ್ಯಕ್ರಮ

# ವೈದ್ಯಕೀಯ ಕ್ಷೇತ್ರದಲ್ಲಿ ಗುಣಾತ್ಮಕ ಸಂಶೋಧನೆಗಳಾಗಿವೆ

■ವಿಜಯಸಾಕ್ಷಿ ಸುದ್ದಿ, ಗದಗ

ಆಧುನಿಕತೆಯ ಇಂದಿನ ದಿನಗಳಲ್ಲಿ ವಿಜ್ಞಾನ ಮತ್ತು ವೈದ್ಯಕೀಯ ಕ್ಷೇತ್ರದಲ್ಲಿ ಸಾಕಷ್ಟು ಗುಣಾತ್ಮಕ ಸಂಶೋಧನೆಗಳಾಗಿದ್ದು, ಬಂಜೆತನಕ್ಕೂ ಸಹ ಉತ್ತರವನ್ನು ಕಂಡುಕೊಳ್ಳಲಾಗಿದೆ ಎಂದು ಸ್ತ್ರೀರೋಗ, ಪ್ರಸೂತಿ ತಜ್ಞರ ಸಂಘದ ರಾಜ್ಯ ಸಂಘದ ಮಾಜಿ ಅಧ್ಯಕ್ಷೆ ಡಾ. ವಿದ್ಯಾ ಥೊಬ್ಬಿ ಹೇಳಿದರು.




ಅವರು ಗದಗ ಐಎಂಎ ಸಭಾಂಗಣದಲ್ಲಿ ಸ್ತ್ರೀರೋಗ, ಪ್ರಸೂತಿ ತಜ್ಞರ ಸಂಘವು ಗದಗ ಐಎಂಎ ಸಹಯೋಗದಲ್ಲಿ ಡಾ. ವ್ಹಿಡಿ. ಚಾಫೇಕರ ಸ್ಮರಣಾರ್ಥ ಏರ್ಪಡಿಸಿದ್ದ ನಿರಂತರ ವೈದ್ಯಕೀಯ ಶಿಕ್ಷಣ (ಸಿಎಂಇ) ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಥೈರಾಯ್ಡ್‌ನಲ್ಲಿ ಇತ್ತೀಚಿನ ಸುಧಾರಣೆಗಳು ವಿಷಯವಾಗಿ ಉಪನ್ಯಾಸ ನೀಡಿದರು.

ಎಲ್ಲರೂ ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು. ಹಿಮೋಗ್ಲೋಬಿನ್, ರಕ್ತದೊತ್ತಡ, ಮಧುಮೇಹ, ಥೈರಾಯ್ಡ್ ಕುರಿತು ಮಾಹಿತಿ ಹೊಂದಿರಬೇಕು ಹಾಗೂ ಮಹಿಳೆಯರು ಎಚ್‌ಪಿವ್ಹಿ ಲಸಿಕೆ ಹಾಕಿಸಿಕೊಳ್ಳುವದು ಮಹತ್ವದ್ದಾಗಿದೆ ಎಂದರು.

ಬೆಂಗಳೂರಿನ ನೋವಾ ವೈದ್ಯಕೀಯ ನಿರ್ದೇಶಕ, ಹಿರಿಯ ಬಂಜೆತನ ಮತ್ತು ಐವ್ಹಿಎಫ್ ತಜ್ಞ ಡಾ. ಮಹೇಶ ಕೊರೆಗೋಲ್ ಅಂಡೋತ್ಪತ್ತಿ ಪ್ರಚೋದನೆ-ಸಲಹೆಗಳು ಮತ್ತು ತಂತ್ರಗಳು ವಿಷಯವಾಗಿ ಮಾತನಾಡಿದರು.

ಮಧ್ಯಾಹ್ನ ನಡೆದ 'ಬಂಜೆತನದ ಪ್ರಕರಣಗಳ ನಿರ್ವಹಣೆ' ಗುಂಪು ಚರ್ಚೆಯ ಅಧ್ಯಕ್ಷತೆಯನ್ನು ತಜ್ಞ ಡಾ. ಮಹೇಶ ಕೊರೆಗೋಲ್ ವಹಿಸಿದ್ದರು. ಈ ವೈದ್ಯಕೀಯ ಚರ್ಚೆಯಲ್ಲಿ ಡಾ. ಶಶಿಧರ್ ರೇಶ್ಮೆ, ಡಾ. ಅನುಪಮಾ ಪಾಟೀಲ, ಡಾ. ಪ್ರಭಾ ದೇಸಾಯಿ, ಡಾ. ಹನುಮಂತ್ ನಿಪ್ಪಾಳ, ಡಾ. ವಿಶ್ವನಾಥ್ ಎನ್ ಶಿವನಗುತ್ತಿ, ಡಾ. ಶ್ರುತಿ ಪಾಟೀಲ ವಿಷಯ ಮಂಡಿಸಿದರು.

ಹುಬ್ಬಳ್ಳಿಯ ಡಾ. ವಿಶ್ವನಾಥ್ ಶಿವನಗುತ್ತಿ ಅವರು 'ಐಯುಐ ಯಶಸ್ಸಿನ ದರಗಳನ್ನು ಅತ್ಯುತ್ತಮವಾಗಿಸುವುದು' ಹಾಗೂ ಗದುಗಿನ ಡಾ. ಅನುಪಮಾ ಪಾಟೀಲ ಅವರು 'ವಿವರಿಸಲಾಗದ ಬಂಜೆತನ' ವಿಷಯವಾಗಿ ಉಪನ್ಯಾಸ ನೀಡಿದರು.

ಡಾ. ಸವಿತಾ ಹೊಂಬಾಳಿ ಪ್ರಾರ್ಥಿಸಿದರು. ಸ್ತ್ರೀರೋಗ, ಪ್ರಸೂತಿ ತಜ್ಞರ ಸಂಘದ ಡಾ. ಪ್ರವೀಣ ಸಜ್ಜನರ ಸ್ವಾಗತಿಸಿದರು, ಕಾರ್ಯದರ್ಶಿ ಡಾ. ರಶ್ಮಿ ಪಾಟೀಲ ನಿರೂಪಿಸಿ ವಂದಿಸಿದರು.

ಸಮಾರಂಭದಲ್ಲಿ ಜಿಮ್ಸ್‌ನ ಡಾ. ಜಯಶ್ರೀ, ರಾಧಿಕಾ ಕುಲಕರ್ಣಿ, ಡಾ. ರಾಜೇಶ್ವರಿ ಕುರಡಗಿ, ಡಾ. ನಾಗರತ್ನಾ ಕೊಲೋಳಗಿ, ಡಾ. ಕುಬಿಹಾಳ, ಡಾ. ವಾಣಿ ಶಿವಪೂರ, ಡಾ. ಶೇಖರ ಸಜ್ಜನರ, ಡಾ. ಆರ್.ಎನ್. ಪಾಟೀಲ, ಖಜಾಂಚಿ ಡಾ. ತೇಜಸ್ವಿನಿ ಹಿರೇಮಠ, ಡಾ. ರಾಜಶೇಖರ ಪಾಟೀಲ, ಡಾ. ತುಕಾರಾಮ ಸೋರಿ ಮುಂತಾದವರಿದ್ದರು.

# ಅನುದಾನ ಒದಗಿಸಲು ಸಚಿವರಿಗೆ ಮನವಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿನ ಹಾಗೂ ಕ್ಷೇತ್ರದ ವಿವಿಧ ಅಬಿವೃದ್ಧಿ ಕಾರ್ಯಗಳಿಗೆ ಅನುದಾನ ಒದಗಿಸುವಂತೆ ಬೆಂಗಳೂರಿನಲ್ಲಿ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಇಲಾಖೆ ಸಚಿವ ಬಿ.ಝಡ್. ಜಮೀರ್ ಅಹ್ಮದ್ ಖಾನ್ ಅವರನ್ನು ಶಾಸಕ ಡಾ. ಚಂದ್ರು ಲಮಾಣಿಯವರು ಇತ್ತೀಚೆಗೆ ಭೇಟಿಯಾಗಿ ಮನವಿ ಮಾಡಿದರು.

ಪಟ್ಟಣದ ಭಾನು ಮಾರ್ಕೆಟ್‌ನಿಂದ ದರ್ಗಾದವರೆಗೆ ಹೋಗುವ ರಸ್ತೆಯ ನಿರ್ಮಾಣದ ಅವಶ್ಯಕತೆಯ ಶಾಸಕರು ಸಚಿವರೊಂದಿಗೆ ಚರ್ಚಿಸಿದರು. ಜೊತೆಗೆ ವಿವಿಧ ಕಾಮಗಾರಿಗಳ ಕುರಿತು ಹಾಗೂ ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಇರುವ ವಸತಿ ರಹಿತರಿಗೆ ವಸತಿ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಮನೆಗಳನ್ನು ಮಂಜೂರು ಮಾಡುವಂತೆ ವಿನಂತಿಸಿದರು.

ಇದಕ್ಕೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿ ಆದಷ್ಟು ಶೀಘ್ರ ಮನವಿಗಳಿಗೆ ಅಧ್ಯತೆ ನೀಡಿ ಅನುದಾನ ಮಂಜೂರಿ ಮಾಡುವದಲ್ಲದೆ, ವಸತಿ ರಹಿತರಿಗೆ ವಸತಿ ಕಲ್ಪಿಸುವ ಯೋಜನೆಯನ್ನು ಸಹ ಕ್ಷೇತ್ರದಲ್ಲಿ ಮಂಜೂರಿ ಮಾಡುವ ಕುರಿತು ಸಹಮತ ವ್ಯಕ್ತಪಡಿಸಿದರು.

### ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ವತಿಯಿಂದ ಆಯೋಜನೆ

# 'ಸಂವಿಧಾನ ಸಮ್ಮಾನ ಸಮಾರಂಭ'




■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ವತಿಯಿಂದ ಗದಗ ನಗರದ ಮುಳಗುಂದ ನಾಕಾದಲ್ಲಿರುವ ಶ್ರೀ ವಿಠಲಾರೂಢ ಕಲ್ಯಾಣ ಮಂಟಪದಲ್ಲಿ 'ಸಂವಿಧಾನ ಸಮ್ಮಾನ ಸಮಾರಂಭ' ಜರುಗಲಿದೆ.

ಸಮಾರಂಭದಲ್ಲಿ ಮಾಜಿ ಮುಖ್ಯಮಂತ್ರಿಗಳು, ಹಾಲಿ ಸಂಸದರಾದ ಬಸವರಾಜ ಬೊಮ್ಮಾಯಿ, ಮಾಜಿ ಸಚಿವರು, ಹಾಲಿ ಶಾಸಕರಾದ ಸಿ.ಸಿ. ಪಾಟೀಲ, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ.ರಾಜೀವ, ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಸಚಿವ ಕಳಕಪ್ಪ ಬಂಡಿ, ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ, ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಸಾಮಾಜಿಕ ಕಾರ್ಯಕರ್ತರಾದ ವಾದಿರಾಜ, ಗದಗ ಜಿಲ್ಲೆಯ 4 ವಿಧಾನಸಭಾ ಕ್ಷೇತ್ರಗಳ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗದ ಎಲ್ಲ ಮುಖಂಡರು ಭಾಗವಹಿಸಲಿದ್ದಾರೆ.

ಈ ಸಮಾರಂಭ ಯಶಸ್ವಿಗೊಳಿಸಬೇಕಾಗಿ ಸಂವಿಧಾನ ಸಮ್ಮಾನ ಅಭಿಯಾನದ ಸಂಚಾಲಕರಾದ ನಾಗರಾಜ ಕುಲಕರ್ಣಿ, ರವಿ ದಂಡಿನ, ಪ್ರಮುಖರಾದ ರಮೇಶ ಸಜ್ಜಗಾರ, ಎಸ್.ಸಿ. ಮೋರ್ಚಾ ಜಿಲ್ಲಾಧ್ಯಕ್ಷ ಮಂಜುನಾಥ ಮುಳಗುಂದ, ಎಸ್.ಟಿ. ಮೋರ್ಚಾ ಜಿಲ್ಲಾಧ್ಯಕ್ಷ ಈಶ್ವರಪ್ಪ ರಂಗಪ್ಪನವರ, ಪ್ರಧಾನ ಕಾರ್ಯದರ್ಶಿ ಸುರೇಶ ಚಲವಾದಿ, ಮಲ್ಲು ಮಾದರ, ಗದಗ ನಗರ ಅಧ್ಯಕ್ಷ ಅನಿಲ ಅಬ್ಬಿಗೇರಿ, ವಾಯ್.ಪಿ. ಅಡ್ನೂರ, ಯಲ್ಲಪ್ಪ ಶಿರಿ, ಹನುಮಂತಪ್ಪ ದಿಂಡೆಣ್ಣವರ, ಅಶೋಕ ಕುಡತಿನಿ, ಉಡಚಪ್ಪ ಹಳ್ಳಿಕೇರಿ, ಲಕ್ಷ್ಮಣ ದೊಡ್ಡಮನಿ, ಮುತ್ತಣ್ಣ ಮೂಲಿಮನಿ, ಗುರು ಹೂಲಿ, ನಾಗರಾಜ ತಳವಾರ, ಪ್ರಶಾಂತ ನಾಯ್ಕರ, ಮಂಜುನಾಥ ತಳವಾರ, ಮಂಜುನಾಥ ಶಾಂತಗೇರಿ, ಸುರೇಶ ಮರಳಪ್ಪನವರ, ಸಂತೋಷ ಕಲ್ಯಾಣಿ, ನವೀನ ಕೊಟೆಕಲ್, ವಿನೋದ ಹಂಸನೂರ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.



ಶ್ರೀ ರಾಮ ಜನ್ಮಭೂಮಿ ಅಯೋಧ್ಯೆಯಲ್ಲಿ ಭವ್ಯ ಮಂದಿರ ನಿರ್ಮಾಣಗೊಂಡು ಒಂದು ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ಲಕ್ಷ್ಮೇಶ್ವರ ನಗರದ ಶ್ರೀ ವೀರಭದ್ರೇಶ್ವರ ಹೋಟೆಲ್ ಆವರಣದಲ್ಲಿ ಶ್ರೀ ರಾಮನ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ ಸಂಭ್ರಮಿಸಲಾಯಿತು. ಈ ಸಂದರ್ಭದಲ್ಲಿ ತಾಲೂಕಾ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಅಧ್ಯಕ್ಷ ಮಂಜುನಾಥ ಮಾಗಡಿ, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಬಸವರಾಜ ಜಾಲಗಾರ, ಮುರುಗೇಂದ್ರಸ್ವಾಮಿ, ವೀರೇಂದ್ರಕುಮಾರ ಕಟಗಿ, ಈರಣ್ಣ ಮಾಗಡಿ, ರಾಜು ಲಿಂಬಿಕಾಯಿ, ಗಣೇಶ ನೂಲ್ವಿ, ಪವನ ಬಂಕಾಪುರ, ಚಂದ್ರು ಮಾಗಡಿ, ಮಲ್ಲಿಕಾರ್ಜುನ ನಿರಾಲೋಟಿ, ಸುರೇಶ ನುಚ್ಚಂಬಲಿ, ನಿಂಗಪ್ಪ ಮುಳಗುಂದ, ವಿಕಾಸ ಮಣ್ಣಪ್ಪನವರ ಮುಂತಾದವರಿದ್ದರು.

# ರಿಯಲ್ ಎಸ್ಟೇಲ್ ಬೆಂಬಲಿಗನಿಗೆ ಥಳಿಸಿದ ಬಿಜೆಪಿ ಸಂಸದ ಈಟೆಲಾ ರಾಜೇಂದರ್

■ವಿಜಯಸಾಕ್ಷಿ ಸುದ್ದಿ, ತೆಲಂಗಾಣ

ಜನರ ಆಸ್ತಿಯನ್ನು ಆಕ್ರಮಿಸಿಕೊಂಡು ಭೂ ದಲ್ಲಾಳಿಯಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ಆರೋಪಿಸಿ ಬಿಜೆಪಿ ಸಂಸದ ಈಟೆಲಾ ರಾಜೇಂದರ್ ಅವರು ಜನರ ಮುಂದೆಯೆ ವ್ಯಕ್ತಿಯೊಬ್ಬರಿಗೆ ಥಳಿಸಿರುವ ಘಟನೆ ತೆಲಂಗಾಣದ ಮೇಡ್ಚಲ್ ಜಿಲ್ಲೆಯ ಪೋಚಾರಂನಲ್ಲಿ ನಡೆದಿದೆ. ಘಟನೆಯನ್ನು ಸಮರ್ಥಿಸಿಕೊಂಡಿರುವ ಸಂಸದ, ತಾನು ಸಂತ್ರಸ್ತ ಜನರ ಪರವಾಗಿ ನಿಂತಿದ್ದಾಗಿ ಹೇಳಿಕೊಂಡಿದ್ದಾರೆ. ತೆಲಂಗಾಣ

ಭೂ ಒತ್ತುವರಿ ಕುರಿತು ದೂರುಗಳ ಹಿನ್ನಲೆ ಬಿಜೆಪಿ ಸಂಸದ ರಾಜೇಂದರ್ ಮೇಡ್ಚಲ್ ಜಿಲ್ಲೆಯ ಪೋಚಾರಂ ಪುರಸಭೆಯ ಏಕಶಿಲಾ ನಗರಕ್ಕೆ ಭೇಟಿ ನೀಡಿದ್ದರು.

## ಗ್ರಾಮ ಪಂಚಾಯತ, ಕಾರ್ಯಾಲಯ, ಬಳಗಾನೂರ

ತಾಲೂಕ ; ಗದಗ ಜಿಲ್ಲಾ:-ಗದಗ

ಸಂ.ಗ್ರಾ.ಪಂಹೆ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ:-22/01/2025

### ៖ ದರಪಟ್ಟಿ ಪ್ರಕಟಣೆ ៖

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತಿ ಬಳಗಾನೂರ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 01 | ಬಳಗಾನೂರ ಗ್ರಾಮದ ಲಿಂಗದಾಳ ರಸ್ತೆಯಿಂದ ಬೇನಾಳವರ ಕಡೆ ಹೋಗುವ ರಸ್ತೆ ಎರಡು ಬದಿ ಚರಂಡಿ ನಿರ್ಮಾಣ | 274561 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |
| 02 | ಬಳಗಾನೂರ ಗ್ರಾಮದ ಶ್ರೀ ದೇವಸ್ಥಾನ ಶರಣಬಸವೇಶ್ವರ ದೇವಸ್ಥಾನದಿಂದ ಗದಗ ರಸ್ತೆವರೆಗೆ ಅಭಿವೃದ್ಧಿ ಪಡಿಸುವದು | 295594 | 500 | |
| 03 | ಬಳಗಾನೂರ ಗ್ರಾಮದ ಮಹಾಬಳೇಶ್ವರ ಹಾದಿಮನಿ ಮನೆಯ ಮುಂದಿನ ರಸ್ತೆವರೆಗೆ ಅಭಿವೃದ್ಧಿ ಪಡಿಸುವದು | 280667 | 500 | |
| 04 | ಬಳಗಾನೂರ ಗ್ರಾಮದ ಮುಲ್ಲಾನವರ ಹಿತ್ತಲದಿಂದ ಗದಗ ರಸ್ತೆ ಕಡೆ ಚರಂಡಿ ನಿರ್ಮಾಣ | 194417 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ : 23/01/2025 ರಿಂದ 31/01/2025 ರವರೆಗೆ

ಖಾಲಿ ದರಪಟ್ಟಿ ಫಾರಂ ನೀಡುವ ದಿನಾಂಕ: 31/01/2025, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ: 31/01/2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.00 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ: 01/02/2025 ರ ಮಧ್ಯಾಹ್ನ 4.00 ಗಂಟೆ

ನಿಬಂಧನೆಗಳು : 1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಬಳಗಾನೂರ ಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/-
**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತಿ ಬಳಗಾನೂರು**

ಸಹಿ ಆಗಿದೆ/-
**ಅಧ್ಯಕ್ಷರು**
**ಗ್ರಾಮ ಪಂಚಾಯತಿ ಬಳಗಾನೂರು**

ಕರ್ನಾಟಕ ಸರ್ಕಾರ

## ಗ್ರಾಮ ಪಂಚಾಯತ ಹಾರೋಗೇರಿ

ತಾ.ಮುಂಡರಗಿ Gmail:harogeri.mun.gdg@gmail.com ಜಿ.ಗದಗ

ಸಂ.ಗ್ರಾ.ಪಂ.ಹಾ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ: 20.01.2025

### ದರಪಟ್ಟಿ ಪ್ರಕಟಣೆ

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಹಾರೋಗೇರಿ ಇವರು 2024-25 ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ. ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ |
|---|---|---|
| 1 | ಹಾರೋಗೇರಿ ಗ್ರಾಮದ ಎಚ್.ಬಿ.ಮೇಟಿ ಪ್ರೌಡಶಾಲೆ ಮುಂದೆ ಗಟಾರ ನಿರ್ಮಾಣ. | 162321.42 |
| 2 | ತಾಂಬ್ರಗುಂಡಿ ಗ್ರಾಮದ ಸತ್ಯಮ್ಮದೇವಿ ದೇವಸ್ಥಾನದಿಂದ ಬನ್ನಿಮರದವರಗೆ ಸಿ ಸಿ ಗಟಾರ ನಿರ್ಮಾಣ. | 163909.71 |
| 3 | ಹಾರೋಗೇರಿ ಗ್ರಾಮದ ಸಿದ್ದವ್ವ ಮುಡಿಯಮ್ಮನವರ ಮನೆಯಿಂದ ಹಳ್ಳದವರೆಗೆ ಸಿ ಸಿ ರಸ್ತೆ ನಿರ್ಮಾಣ. | 164422.94 |
| 4 | ಕೆಲೂರ ಗ್ರಾಮದ ಕಪ್ಪತ್ತಪ್ಪ ಜಾಲವಾಡಗಿ ಮನೆಯಿಂದ ಮಹಾದೇವಪ್ಪ ತಿಮ್ಮಾಪೂರ ಮನೆಯವರೆಗೆ ಸಿ ಸಿ ರಸ್ತೆ ನಿರ್ಮಾಣ. | 164422.94 |
| 5 | ಬ ಗ್ರಾ ಚಂದ್ರಶೇಖರ ತಳವಾರ ಮನೆಯಿಂದ ಚಂದ್ರಶೇಖರಯ್ಯ ವಿರುಪಾಪೂರ ಮನೆಯವರೆಗೆ ಸಿ ಸಿ ರಸ್ತೆ ನಿರ್ಮಾಣ. | 164422.94 |
| 6 | ಹಾರೋಗೇರಿ ಗ್ರಾಮದ ಬಸಾಪೂರ ಮುಖ್ಯ ರಸ್ತೆಯಿಂದ ಹನಮವ್ವ ವಡ್ಡರ ಹೊಲದವರೆಗೆ ಮೊರಂ ಹಾಕುವುದು. | 180764.31 |
| 7 | ಕೆಲೂರ ಗ್ರಾಮದ ಗೋವಿಂದಪ್ಪ ಕೊಡ್ಲಿ ಮನೆಯಿಂದ ಶೇಖಪ್ಪ ಕಲಿವಾಳ ಹೊಲದವರೆಗೆ ಮೊರಂ ರಸ್ತೆ ನಿರ್ಮಾಣ. | 180764.31 |
| 8 | ಹಾ ಗ್ರಾ ಕಲಕೇರಿ ಮುಖ್ಯ ರಸ್ತೆಯಿಂದ ಶಿದ್ದಪ್ಪ ಮಕರಬ್ಬಿ ಹೋಲದವರೆಗೆ ರಸ್ತೆಗೆ ಅಭಿವೃದ್ಧಿ. | 180764.31 |
| 9 | ಬಸಾಪೂರ ಗ್ರಾಮದ ತಾಂಬ್ರಗುಂಡಿ ರಸ್ತೆ ಪಕ್ಕದಲ್ಲಿ ಗಟಾರ ಮತ್ತು ಸಿ ಡಿ ನಿರ್ಮಾಣ. | 162741.42 |
| 10 | ಹಾರೋಗೇರಿ ಗ್ರಾಮದ ಅಮೃತವ್ವ ಹಳ್ಳಿ ಮನೆಯಿಂದ ಹಳ್ಳದವರೆಗೆ ಗಟಾರ ನಿರ್ಮಾಣ. | 164665.71 |
| 11 | ಹಾ ಗ್ರಾ ಬಳ್ಳಾರಿ ಮನೆಯಿಂದ ಹಳ್ಳದವರಗೆ ಸಿ ಸಿ ಗಟಾರ ನಿರ್ಮಾಣ. | 164665.71 |
| 12 | ಹಾ ಗ್ರಾ ಅಂಗನವಾಡಿ ಕೇಂದ್ರ-2 ದಿಂದ ಹಳ್ಳದವರೆಗೆ ಗಟಾರ ನಿರ್ಮಾಣ. | 164665.71 |
| 13 | ಹಾ ಗ್ರಾ ದ್ಯಾಮವ್ವ ವಡ್ಡರ ಮನೆಯಿಂದ ಹಳ್ಳದವರೆಗೆ ಗಟಾರ ಮತ್ತು ಸಿ ಡಿ ನಿರ್ಮಾಣ. | 162997.19 |

**ಷರಾಃ ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸವುದು ಹಾಗೂ ಪ್ರತಿ ಕಾಮಗಾರಿಯ ಖಾಲಿ ಟೆಂಡರ್ ಫಾರಂ ಬೆಲೆ 500 ರೂ. ಗಳು, ನಿಗದಿಪಡಿಸಿದೆ.** ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರ್ಮಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ:**23/01/2025 ರಿಂದ 30/01/2025** ರವರೆಗೆ. ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ:**01/02/2025 ಮುಂಜಾನೆ 10.00** ಗಂಟೆಯಿಂದ **ಮಧ್ಯಾಹ್ನ 2.30** ಗಂಟೆವರೆಗೆ. ಟೆಂಡರ್ ತೆರೆಯುವ ದಿನಾಂಕ ಹಾಗೂ ಸಮಯ:- **03/02/2025 ರ ಮಧ್ಯಾಹ್ನ 3.00ಗಂಟೆ.**

**ನಿಬಂಧನೆಗಳು:** ಷರತ್ತು/ನಿಬಂಧನೆಗಳಿಗೆ, ಹಾಗೂ ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಗ್ರಾಮ ಪಂಚಾಯತ ಹಾರೋಗೇರಿದಿಂದ ಮಾಹಿತಿ ಪಡೆಯಬಹುದಾಗಿದೆ.

**ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತಿ ಹಾರೋಗೇರಿ**

**ಸಹಿ/- ಅಧ್ಯಕ್ಷರು**
**ಗ್ರಾಮ ಪಂಚಾಯತಿ ಹಾರೋಗೇರಿ**

ವಾ.ಸಾ.ಇ/ಗದಗ/551/ದೇಶಪಾಂಡೆಪಬ್ಲಿಸಿಟಿ/2024-25

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka